ಸಂಪುಟ 01 | ಸಂಚಿಕೆ 196 ಭಾನುವಾರ 20 ಸೆಪ್ಟೆಂಬರ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1) World Cleanup Day ? ವಿಶ್ವ ಸ್ವಚ್ಛತಾ ದಿನ ಪ್ರತಿವರ್ಷ ಸೆಪ್ಟೆಂಬರ್ 20ರಂದು ಆಚರಿಸಲಾಗುತ್ತದೆ. ಪರಿಸರ ಸ್ವಚ್ಛತೆ, ತ್ಯಾಜ್ಯ ಕಡಿತ ಮತ್ತು ಸ್ವಚ್ಛ ನಗರಗಳ ಬಗ್ಗೆ ಜಾಗೃತಿ ಮೂಡಿಸುವ ದಿನ.

2) International Day of University Sport ? ಅಂತರರಾಷ್ಟ್ರೀಯ ವಿಶ್ವವಿದ್ಯಾಲಯ ಕ್ರೀಡಾ ದಿನ ವಿಶ್ವವಿದ್ಯಾಲಯ ಮಟ್ಟದಲ್ಲಿ ಕ್ರೀಡೆ ಮತ್ತು ವಿದ್ಯಾರ್ಥಿಗಳ ಸಕ್ರಿಯ ಜೀವನಶೈಲಿಯ ಮಹತ್ವವನ್ನು ಗುರುತಿಸುವ ದಿನ.

3) ಪತ್ನಿಯನ್ನು ಮೆಚ್ಚುವ ದಿನ Wife Appreciation Day Wife Appreciation Day ಅನ್ನು ಪ್ರತಿ ವರ್ಷ ಸೆಪ್ಟೆಂಬರ್‌ನ ಮೂರನೇ ಭಾನುವಾರ ಆಚರಿಸಲಾಗುತ್ತದೆ. 2026ರಲ್ಲಿ ಇದು ಸೆಪ್ಟೆಂಬರ್ 20ರಂದು ಬರುತ್ತದೆ.

ಸುಭಾಷಿತ

ಚಿಂತನೆ ಇಲ್ಲದೆ ಕಲಿಯುವುದು ವ್ಯಥ-
ರ್ಥ. ಕಲಿಯದೇ ಚಿಂತನೆ ಮಾಡುವುದು
ಅಪಾಯಕರ.

-ಕನ್‌ಫ್ಯೂಷಿಯಸ್

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

ಆಯುರ್ವೇದವು ಆರೋಗ್ಯಕರ ಜೀವನಕ್ಕೆ ಪೂರಕ: ಡಾ. ಪವನ್ ಕುಮಾರ್ ನಕ್ಕುಂಟಿ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಸನ್ ರೈಸ್ ಡಿ ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕಾಲೇಜು, ಸಿಂಧನೂರು ವತಿಯಿಂದ ಪ್ರತೀ ಶನಿವಾರ ಹಮ್ಮಿಕೊಳ್ಳಲಾಗುತ್ತಿರುವ ವಿಶೇಷ ಉಪನ್ಯಾಸ ಕಾರ್ಯಕ್ರಮದ ಅಂಗವಾಗಿ ಸೆಪ್ಟೆಂಬರ್ 19ರಂದು ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನಲ್ಲಿ ವಿಶೇಷ ಉಪನ್ಯಾಸ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಸಿಂಧನೂರಿನ ಸುಶ್ರುತಾ ಆಯುರ್ವೇದಿಕ್ ಆಸ್ಪತ್ರೆಯ ಖ್ಯಾತ ಆಯುರ್ವೇದ ತಜ್ಞರಾದ ಡಾ. ಪವನ್ ಕುಮಾರ್ ನಕ್ಕುಂಟಿ (BAMS, MD) ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ, "ಆಯುರ್ವೇದ ಆರೋಗ್ಯ" ಎಂಬ ವಿಷಯದ ಕುರಿತು ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ನೀಡಿದರು. ಆಯುರ್ವೇದವು ಕೇವಲ ರೋಗ ಬಂದ ನಂತರ ಚಿಕಿತ್ಸೆ ಪಡೆಯುವ ಪದ್ಧತಿಯಲ್ಲ, ಬದಲಾಗಿ ರೋಗ ಬಾರದಂತೆ ದೇಹ ಮತ್ತು ಮನಸ್ಸಿನ ಆರೋಗ್ಯವನ್ನು ಕಾಪಾಡಿಕೊಳ್ಳುವ ಜೀವನ ಪದ್ಧತಿಯಾಗಿದೆ ಎಂದು ಡಾ. ಪವನ್ ಕುಮಾರ್ ನಕ್ಕುಂಟಿ ಅವರು ವಿವರಿಸಿದರು. ವ್ಯಕ್ತಿಯ ದೈನಂದಿನ ಜೀವನಶೈಲಿ, ಆಹಾರ ಪದ್ಧತಿ, ನಿದ್ರೆ, ವ್ಯಾಯಾಮ, ವೈಯಕ್ತಿಕ ಸ್ವಚ್ಛತೆ ಹಾಗೂ ಮಾನಸಿಕ ಸಮತೋಲನವು ಉತ್ತಮ ಆರೋಗ್ಯಕ್ಕೆ ಪ್ರಮುಖ ಅಂಶಗಳಾಗಿವೆ ಎಂದು ತಿಳಿಸಿದರು.

ಆಯುರ್ವೇದದಲ್ಲಿ "ಸ್ವಸ್ಥಸ್ಯ ಆರೋಗ್ಯ ರಕ್ಷಣಂ, ಆತುರಸ್ಯ ವಿಕಾರ ಪ್ರಶಮನಂ" ಎಂಬ ಮೂಲ ತತ್ವವಿದ್ದು, ಆರೋಗ್ಯವಂತರ ಆರೋಗ್ಯವನ್ನು ಕಾಪಾಡುವುದು ಹಾಗೂ ಅನಾರೋಗ್ಯದಿಂದ ಬಳಲುತ್ತಿರುವವರ ಕಾಯಿಲೆಯನ್ನು ಶಮನಗೊಳಿಸುವುದು ಆಯುರ್ವೇದ ಚಿಕಿತ್ಸಾ ಪದ್ಧತಿಯ ಪ್ರಮುಖ ಉದ್ದೇಶವಾಗಿದೆ ಎಂದು ಅವರು ಹೇಳಿದರು. ಪ್ರಕೃತಿಗೆ ಹೊಂದಿಕೊಂಡ ಜೀವನಶೈಲಿ, ಸಮತೋಲಿತ ಆಹಾರ, ನಿಯಮಿತ ದಿನಚರಿ ಹಾಗೂ ಆರೋಗ್ಯಕರ ಅಭ್ಯಾಸಗಳನ್ನು ರೂಢಿಸಿಕೊಳ್ಳುವ ಮೂಲಕ ಅನೇಕ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟಲು ಸಾಧ್ಯವಿದೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಇಂದಿನ ವೇಗದ ಜೀವನಶೈಲಿ, ಅನಿಯಮಿತ ಆಹಾರ ಸೇವನೆ, ನಿದ್ರೆಯ ಕೊರತೆ, ಒತ್ತಡ ಹಾಗೂ ದೈಹಿಕ ಚಟುವಟಿಕೆಗಳ ಕೊರತೆಯಿಂದ ಆರೋಗ್ಯ ಸಮಸ್ಯೆಗಳು



ಹೆಚ್ಚಾಗುತ್ತಿವೆ. ಆದ್ದರಿಂದ ವಿದ್ಯಾರ್ಥಿಗಳು ಚಿಕ್ಕ ವಯಸ್ಸಿನಿಂದಲೇ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಇದೇ ಸಂದರ್ಭದಲ್ಲಿ ನರ್ಸಿಂಗ್ ವೃತ್ತಿಯ ಮಹತ್ವ ಕುರಿತು ಮಾತನಾಡಿದ ಡಾ. ಪವನ್ ಕುಮಾರ್ ನಕ್ಕುಂಟಿ ಅವರು, ವೈದ್ಯಕೀಯ ಕ್ಷೇತ್ರದಲ್ಲಿ ನರ್ಸ್‌ಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ರೋಗಿಯ ಆರೈಕೆ, ಔಷಧೋಪಚಾರದ ಮೇಲ್ವಿಚಾರಣೆ, ರೋಗಿಯ ಮಾನಸಿಕ ಸ್ಥೈರ್ಯ ಹೆಚ್ಚಿಸುವುದು, ಆರೋಗ್ಯ ಶಿಕ್ಷಣ ನೀಡುವುದು ಹಾಗೂ ವೈದ್ಯರು ಮತ್ತು ರೋಗಿಯ ನಡುವೆ ಪ್ರಮುಖ ಸಂಪರ್ಕ ಸೇತುವೆಯಾಗಿ ಕಾರ್ಯನಿರ್ವಹಿಸುವ ಜವಾಬ್ದಾರಿ ನರ್ಸ್‌ಗಳ ಮೇಲಿದೆ ಎಂದು ಹೇಳಿದರು.

ನರ್ಸಿಂಗ್ ವಿದ್ಯಾರ್ಥಿಗಳು ಕೇವಲ ಪಠ್ಯಪುಸ್ತಕದ ಜ್ಞಾನಕ್ಕೆ ಸೀಮಿತವಾಗದೆ, ರೋಗಿಗಳೊಂದಿಗೆ ಮಾನವೀಯತೆ, ಕರುಣೆ, ತಾಳ್ಮೆ ಮತ್ತು ಆತ್ಮೀಯತೆಯಿಂದ ನಡೆದುಕೊಳ್ಳುವ ಗುಣಗಳನ್ನು ಬೆಳೆಸಿಕೊಳ್ಳಬೇಕು. ಆರೋಗ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುವ ಅವಕಾಶವನ್ನು ಸಮಾಜ ಸೇವೆಯ ಒಂದು ಪ್ರಮುಖ ಭಾಗವೆಂದು ಪರಿಗಣಿಸಿ, ವೃತ್ತಿಪರ ಜ್ಞಾನ ಮತ್ತು ಮಾನವೀಯ ಮೌಲ್ಯಗಳನ್ನು ಸಮನ್ವಯಗೊಳಿಸಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಉಪನ್ಯಾಸದ ಸಂದರ್ಭದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ ಅವರು, ಆರೋಗ್ಯ, ಆಯುರ್ವೇದ, ಜೀವನಶೈಲಿ ಹಾಗೂ ನರ್ಸಿಂಗ್ ವೃತ್ತಿಗೆ ಸಂಬಂಧಿಸಿದ ಹಲವು ವಿಚಾರಗಳ ಕುರಿತು ಮಾಹಿತಿ ಹಂಚಿಕೊಂಡರು. ಅವರ ಉಪನ್ಯಾಸವು ವಿದ್ಯಾರ್ಥಿಗಳಲ್ಲಿ ಹೊಸ ಉತ್ಸಾಹ, ಆತ್ಮವಿಶ್ವಾಸ ಹಾಗೂ ವೃತ್ತಿಪರ ದೃಷ್ಟಿಕೋನವನ್ನು ಮೂಡಿಸಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನ ಪ್ರಾಚಾರ್ಯರಾದ ಲಾಜರ್ ಸಿರಿಲ್ ಅವರು ಮಾತನಾಡಿ, ಸನ್ ರೈಸ್ ವಿದ್ಯಾಸಂಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಪಠ್ಯ ಶಿಕ್ಷಣದ ಜೊತೆಗೆ ವೈದ್ಯಕೀಯ ಕ್ಷೇತ್ರದ ಅನುಭವಿಗಳು ಹಾಗೂ ತಜ್ಞರಿಂದ ನಿರಂತರವಾಗಿ ವಿಶೇಷ ಉಪನ್ಯಾಸಗಳನ್ನು ಆಯೋಜಿಸಲಾಗುತ್ತಿದೆ. ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಜ್ಞಾನವನ್ನು ವಿಸ್ತರಿಸುವುದರ ಜೊತೆಗೆ, ಭವಿಷ್ಯದ ವೃತ್ತಿಜೀವನಕ್ಕೆ ಅಗತ್ಯವಾದ ಆತ್ಮವಿಶ್ವಾಸವನ್ನು ಬೆಳೆಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು. ವಿದ್ಯಾರ್ಥಿಗಳಿಗೆ "ಆಯುರ್ವೇದ ಆರೋಗ್ಯ" ಹಾಗೂ ನರ್ಸಿಂಗ್ ವೃತ್ತಿಯ ಮಹತ್ವದ ಕುರಿತು ಅಮೂಲ್ಯವಾದ ಮಾಹಿತಿಯನ್ನು ನೀಡಿದ ಡಾ. ಪವನ್ ಕುಮಾರ್ ನಕ್ಕುಂಟಿ ಅವರಿಗೆ ಸನ್ ರೈಸ್ ವಿದ್ಯಾಸಂಸ್ಥೆಯ ಅಧ್ಯಕ್ಷರಾದ ಶ್ರೀ ಇರ್ಫಾನ್ ಕೆ, ಕಾರ್ಯದರ್ಶಿಯಾದ ಶ್ರೀ ಇರ್ಷಾದ್ ಕೆ, ಎಲ್ಲಾ ವಿಭಾಗಗಳ ಪ್ರಾಚಾರ್ಯರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳ ಪರವಾಗಿ ಲಾಜರ್ ಸಿರಿಲ್ ಅವರು ಹೃತ್ಪೂರ್ವಕ ಧನ್ಯವಾದಗಳನ್ನು ಸಲ್ಲಿಸಿದರು.

ಸನ್ ರೈಸ್ ವಿದ್ಯಾಸಂಸ್ಥೆಯಲ್ಲಿ ಪ್ರತೀ ಶನಿವಾರ ಆಯೋಜಿಸಲಾಗುತ್ತಿರುವ ವಿಶೇಷ ಉಪನ್ಯಾಸ ಕಾರ್ಯಕ್ರಮವು ವಿದ್ಯಾರ್ಥಿಗಳ ಶೈಕ್ಷಣಿಕ ಜ್ಞಾನಕ್ಕೆ ಪೂರಕವಾಗುವುದರ ಜೊತೆಗೆ, ಆರೋಗ್ಯ ಕ್ಷೇತ್ರದ ವಿವಿಧ ಆಯಾಮಗಳ ಬಗ್ಗೆ ಪ್ರಾಯೋಗಿಕ ಹಾಗೂ ವೃತ್ತಿಪರ ಅರಿವು ಮೂಡಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ. ವಿವಿಧ ವೈದ್ಯಕೀಯ ವಿಭಾಗಗಳ ತಜ್ಞರನ್ನು ಆಹ್ವಾನಿಸಿ ವಿದ್ಯಾರ್ಥಿಗಳಿಗೆ ನೇರವಾಗಿ ಜ್ಞಾನ ಹಂಚಿಕೊಳ್ಳುವ ಅವಕಾಶ ಕಲ್ಪಿಸುತ್ತಿರುವುದು ಸಂಸ್ಥೆಯ ಶೈಕ್ಷಣಿಕ ಚಟುವಟಿಕೆಗಳಲ್ಲಿ ಗಮನಾರ್ಹವಾಗಿದೆ. ಕಾರ್ಯಕ್ರಮದಲ್ಲಿ ನರ್ಸಿಂಗ್ ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು, ವಿಶೇಷ ಉಪನ್ಯಾಸದಲ್ಲಿ ಸಕ್ರಿಯವಾಗಿ ಭಾಗವಹಿಸಿದರು. ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಆರೋಗ್ಯದ ಕುರಿತು ಜಾಗೃತಿ ಹಾಗೂ ನರ್ಸಿಂಗ್ ವೃತ್ತಿಯ ಬಗ್ಗೆ ಮತ್ತಷ್ಟು ಗೌರವ ಮತ್ತು ಆತ್ಮವಿಶ್ವಾಸ ಮೂಡಿಸುವ ಮೂಲಕ ಯಶಸ್ವಿಯಾಗಿ ನಡೆಯಿತು.








ಹೊಸೂರು ಸಿದ್ದಾಪುರ ಗ್ರಾಮದಲ್ಲಿ ಸಾಂಸ್ಕೃತಿಕ ಭವನ ಮಂಜೂರಿಗೆ ಸಂಸದರಿಗೆ ಮನವಿ

❑ ನೈಜ್ಯ ದೆಸೆ ನ್ಯೂಸ್

ದೇವದುರ್ಗ: ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಹೊಸೂರು ಸಿದ್ದಾಪುರ ಗ್ರಾಮದ ಅಭಿವೃದ್ಧಿಗೆ ಅಗತ್ಯವಿರುವ ಸಾಂಸ್ಕೃತಿಕ ಭವನವನ್ನು ಸಂಸದರ ಅನುದಾನದಲ್ಲಿ ಮಂಜೂರು ಮಾಡಿ ನಿರ್ಮಿಸಿಕೊಡುವಂತೆ ಗ್ರಾಮಸ್ಥರು ಸಂಸದರಿಗೆ ಮನವಿ ಸಲ್ಲಿಸಿದರು.

ಹೊಸೂರು ಸಿದ್ದಾಪುರ ಗ್ರಾಮದ ಮುಖಂಡರಾದ ಬಸವರಾಜ ಮಂಡಲಗುಡ್ಡ ಅವರ ನೇತೃತ್ವದಲ್ಲಿ ಗ್ರಾಮಸ್ಥರು ರಾಯಚೂರಿನ ಸಂಸದರ ಕಚೇರಿಗೆ ತೆರಳಿ, ರಾಯಚೂರು ಸಂಸದರಾದ ಶ್ರೀ ಜಿ. ಕುಮಾರ್ ನಾಯಕ ಅವರನ್ನು ಭೇಟಿಯಾಗಿ ಗ್ರಾಮದಲ್ಲಿ ಸಾಂಸ್ಕೃತಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳನ್ನು ನಡೆಸಲು ಸೂಕ್ತವಾದ ಭವನದ ಅಗತ್ಯವಿದೆ ಎಂದು ತಿಳಿಸಿದರು. ಗ್ರಾಮದಲ್ಲಿ ವಿವಿಧ ಸಾಂಸ್ಕೃತಿಕ, ಧಾರ್ಮಿಕ ಹಾಗೂ ಸಾರ್ವಜನಿಕ ಕಾರ್ಯಕ್ರಮಗಳನ್ನು



ಆಯೋಜಿಸಲು ಸಾಂಸ್ಕೃತಿಕ ಭವನದ ಅವಶ್ಯಕತೆ ಇದ್ದು, ಸಂಸದರ ಪ್ರದೇಶಾಭಿವೃದ್ಧಿ ನಿಧಿಯಿಂದ ಅನುದಾನ ಮಂಜೂರು ಮಾಡಿ ಭವನ ನಿರ್ಮಿಸಿಕೊಡುವಂತೆ ಮನವಿ ಮಾಡಿದರು.

ಮನವಿಗೆ ಸ್ಪಂದಿಸಿದ ಸಂಸದ ಜಿ. ಕುಮಾರ್ ನಾಯಕ ಅವರು, ಸಾಂಸ್ಕೃತಿಕ ಭವನ ನಿರ್ಮಾಣದ ಬೇಡಿಕೆಯ ಕುರಿತು ಮುಂದಿನ ದಿನಗಳಲ್ಲಿ ಪರಿಶೀಲನೆ ನಡೆಸುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರು ಹಾಗೂ ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯರಾದ ಶಿವು ಪಾಟೀಲ್ ಗಾಣದಾಳ್, ಹೊಸೂರು ಸಿದ್ದಾಪುರ ಗ್ರಾಮದ ಮುಖಂಡರಾದ ಬಸವರಾಜ ಮಂಡಲಗುಡ್ಡ, ಶಿವಪ್ಪ, ವೆಂಕಟೇಶ ಹಾಗೂ ದೇವರಾಜು ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

ಕೋಟಿ ದಾಟಿದ ಶೇರು ಬಂಡವಾಳ: ಕಂಪ್ಲಿ ಕೃಷಿ ಪತ್ತಿನ ಸಹಕಾರ ಸಂಘದಿಂದ ಭರ್ಜರಿ ಪ್ರಗತಿ

❑ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ಪಟ್ಟಣದ ಹೊಸ ಬಸ್ ನಿಲ್ದಾಣದ ಮುದ್ದಾಪುರ ಅಗಸಿಯಲ್ಲಿರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಕಚೇರಿ ಆವರಣದಲ್ಲಿ 47ನೇ ವಾರ್ಷಿಕ ಮಹಾಜನ ಸಭೆ ಶುಕ್ರವಾರ ನಡೆಯಿತು.

ನಂತರ ಮುಖ್ಯಕಾರ್ಯನಿರ್ವಾಹಕ ಹೆಚ್.ಈರಣ್ಣ ವಾರ್ಷಿಕ ವರದಿ ಮಂಡಿಸಿ ಮಾತನಾಡಿ, ಸಂಘವು 4068 ಜನ ಸದಸ್ಯರಿದ್ದು, ಇದರಲ್ಲಿ ಸುಮಾರು 1 ಕೋಟಿ 32 ಲಕ್ಷ 85ಸಾವಿರ 200 ರೂ.ಗಳ ಶೇರು ಬಂಡವಾಳ ಹೊಂದಿದೆ. 7 ಕೋಟಿ 19 ಲಕ್ಷ 84ಸಾವಿರ ಕೆಸಿಸಿ ಅಲ್ಪಾವಧಿ ಸಾಲ, 1 ಕೋಟಿ 69 ಲಕ್ಷ 98 ಸಾವಿರ ಬಿಡಿಪಿ ಸಾಲ, 10 ಜನರಿಗೆ 36 ಲಕ್ಷ ಪಂಪ್‌ಸೆಟ್ ಸಾಲ, 5 ಲಕ್ಷ ಸ್ವಸಹಾಯಕ ಗುಂಪಿಗೆ ಸಾಲ, 2025-26ನೇ ಸಾಲಿನಲ್ಲಿ ಸಂಘವು ಆಡಿಟ್ ವರ್ಗೀಕರಣದಲ್ಲಿ "ಎ"ಗ್ರೇಡ್ ಸಾಧನೆ ಮಾಡಿದೆ. ಸುಮಾರು 1 ಕೋಟಿ 47 ಲಕ್ಷ 64 ಸಾವಿರ 799 ರೂ.ಗಳ ರಸಗೊಬ್ಬರ ವ್ಯವಹಾರ ನಡೆಸಿ, 24 ಲಕ್ಷ 16 ಸಾವಿರ 656 ರೂ.ಗಳ ವ್ಯಾಪಾರಿ



ಲಾಭಗಳಿಸಿದೆ. ಸಂಘದಲ್ಲಿ 2,84,64,722 ರೂ.ಗಳ ಠೇವಣಿ ಇರುತ್ತದೆ. 2025-26ನೇ ಸಾಲಿನಲ್ಲಿ ಸಂಘವು 12 ಲಕ್ಷ 40 ಸಾವಿರ 374 ನಿವ್ವಳ ಲಾಭ ಹೊಂದಿದೆ.

ಸಂಘದ ಅಭಿವೃದ್ಧಿಗೆ ಪ್ರತಿಯೊಂದು ಹಂತದಲ್ಲಿ ಸಂಘದ ಆಡಳಿತ ಮಂಡಳಿಯವರು, ರೈತರು, ಮುಖಂಡರು ಸಹಕಾರ ನೀಡುತ್ತಾ ಬಂದಿದ್ದು, ಇದೇ ತರನಾಗಿ ಸಹಕರಿಸಿ, ಮತ್ತಷ್ಟು ಅಭಿವೃದ್ಧಿಗೆ ಕೈಜೋಡಿಸಬೇಕು ಎಂದರು. ಸಂಘದ ಅಧ್ಯಕ್ಷ ಬಿ. ಬಸವರಾಜ ಸಭೆಯ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಗಂಗಣ್ಣ ತಳವಾರ, ನಿರ್ದೇಶಕರಾದ ಕಟ್ಟೆ ಸಣ್ಣ ದುರುಗಪ್ಪ, ಅಳ್ಳಿ ನಾಗರಾಜ, ಈರಪ್ಪ ಜೋಳಮಾರ, ಬಳೆ ಮಲ್ಲಿಕಾರ್ಜುನ, ಟಿ.ನಿರಂಜನಯ್ಯ, ಸಣ್ಣಪ್ಪ ಎಸ್, ರಾಜೇಶ ಶೆರೆಗಾರ, ಕೃಷ್ಣ ಕೆ, ವಿಶಾಲಾಕ್ಷಿ ಬಿ.ಎಂ, ಕೆ. ನಾಗಮ್ಮ, ವಿ. ರಾಮಚಂದ್ರ(ಕ್ಷೇತ್ರ ಅಧಿಕಾರಿ), ಸಿಬ್ಬಂದಿಗಳಾದ ಕೆ.ಪ್ರಕಾಶ, ಹೆಚ್.ಪರಶುರಾಮ, ಎನ್.ಮಂಜುನಾಥ, ಕೆ.ಭರತ್, ಯು.ಮಂಜುನಾಥ, ಹೆಚ್.ಸಿದ್ದೇಶ, ಪಣಿ ಸೋಮಪ್ಪ ಸೇರಿದಂತೆ ಮುಖಂಡರು, ರೈತರು ಇದ್ದರು.

ಹೆಣ್ಣುಮಕ್ಕಳಿಗೆ ಶಿಕ್ಷಣ ನೀಡುವುದು ಕೇವಲ ಒಂದು ಕುಟುಂಬದ ಪ್ರಗತಿಯಲ್ಲ, ಬದಲಿಗೆ ಇಡೀ ಸಮಾಜ ಮತ್ತು ದೇಶದ ಬೆಳವಣಿಗೆಗೆ ನಾಂದಿ : ಹವಾಲ್ದಾರ್ ನಾಗರಾಜ ಅಭಿಮತ

❑ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ವಿದ್ಯಾರ್ಥಿನಿಯರ ಭವಿಷ್ಯವು ಅವರ ಶಿಕ್ಷಣದಲ್ಲಿಯೇ ಅಡಗಿದ್ದು, ಹೆಣ್ಣುಮಕ್ಕಳಿಗೆ ಶಿಕ್ಷಣ ನೀಡುವುದು ಕೇವಲ ಒಂದು ಕುಟುಂಬದ ಪ್ರಗತಿಯಲ್ಲ, ಬದಲಿಗೆ ಇಡೀ ಸಮಾಜ ಮತ್ತು ದೇಶದ ಬೆಳವಣಿಗೆಗೆ ನಾಂದಿಯಾಗುತ್ತದೆ ಎಂದು ವಿಜಯನಗರ ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ಯ ನೋಡಲ್ ಅಧಿಕಾರಿ ಹವಾಲ್ದಾರ್ ನಾಗರಾಜ ಅಭಿಮತ ವ್ಯಕ್ತಪಡಿಸಿದರು.

ಪಟ್ಟಣದ ಸಣಾಪುರ ರಸ್ತೆಯ ಬಿ.ವೈ.ಎಸ್ ಗಾರ್ಡ್ಸ್‌ನಲ್ಲಿ ವಿನೂತನ ಮಹಿಳಾ ಪದವಿ ಮಹಾವಿದ್ಯಾಲಯ, ಮದರ್ ತೆರೇಸಾ ಕಲಾ ಮತ್ತು ವಾಣಿಜ್ಯ ಪದವಿ ಪೂರ್ವ ಕಾಲೇಜು ನೇತೃತ್ವದಲ್ಲಿ ಶನಿವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸೇವಾ ಯೋಜನೆ(ಎನ್‌ಎಸ್‌ಎಸ್) ಹಾಗೂ ಪ್ರಥಮ ವರ್ಷದ ಬಿ.ಎ, ಬಿ.ಕಾಂ, ಪಿಯುಸಿ ವಿದ್ಯಾರ್ಥಿನಿಯರ ಸ್ವಾಗತ ಕಾರ್ಯಕ್ರಮದಲ್ಲಿ ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿ, ಜ್ಞಾನವು ಹೆಣ್ಣುಮಕ್ಕಳಲ್ಲಿ ಆತ್ಮವಿಶ್ವಾಸವನ್ನು



ತುಂಬುತ್ತದೆ. ಸಮಾಜದಲ್ಲಿ ತಮ್ಮ ಹಕ್ಕುಗಳಿಗಾಗಿ ಧ್ವನಿ ಎತ್ತಲು ಮತ್ತು ವಿವಿಧ ಕ್ಷೇತ್ರಗಳಲ್ಲಿ ನಾಯಕತ್ವ ವಹಿಸಿಕೊಳ್ಳಲು ಇದು ಅವರಿಗೆ ಶಕ್ತಿ ನೀಡುತ್ತದೆ. ಮಕ್ಕಳಿಗೆ ಪರೀಕ್ಷೆ ಉದ್ದೇಶದಿಂದ ಬೋಧಿಸದೇ ಜೀವನವನ್ನು ರೂಪಿಸಿಕೊಳ್ಳುವ ಮಾನವೀಯ ಮೌಲ್ಯಗಳ ಶಿಕ್ಷಣ ನೀಡಬೇಕು.

ಕಟ್ಟಿಟ್ಟ ಜ್ಞಾನ ಕೊಳೆಯುತ್ತದೆ. ಬಿಚ್ಚಿಟ್ಟ ಜ್ಞಾನ ಹೊಳೆಯುತ್ತದೆ ಎಂದರು. ನಂತರ ವಿವಿಎಸ್‌ಎಸ್ ಟ್ರಸ್ಟ್ ಅಧ್ಯಕ್ಷೆ ರಾಜಮ್ಮ ಹುಲುಗಪ್ಪ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿ, ಹೆಳ್ಮಕ್ಕಳ ಭವಿಷ್ಯ ಚೆನ್ನಾಗಿರಲು ಶಿಕ್ಷಣದ ಜೊತೆಗೆ ಜೀವನಾಧರಿತ ಮೌಲ್ಯಗಳು ಅಗತ್ಯವಾಗಿದೆ. ಶಿಕ್ಷಣದೊಂದಿಗೆ ಪ್ರತಿಯೊಂದು ಹಂತದಲ್ಲಿ ತಮ್ಮ ಪ್ರತಿಭೆಗಳ ಮೂಲಕ ದೊಡ್ಡ ಮಟ್ಟದಲ್ಲಿ ಬೆಳೆಯಬೇಕು ಎಂದರು. ತದನಂತರ ವಿನೂತನ ಮಹಿಳಾ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲ ಮದ್ದಾನೆಪ್ಪ ಬಿಡನಾಳ್ ಮಾತನಾಡಿ, ಈ ಭಾಗದ ಬಡ ಹಾಗೂ ಮಧ್ಯಮ ವರ್ಗದ ಹೆಳ್ಮಕ್ಕಳ ಭವಿಷ್ಯದ ಹಿತದೃಷ್ಟಿಯಿಂದ ವಿವಿಎಸ್‌ಎಸ್ ಟ್ರಸ್ಟ್, ವಿನೂತನ ಮಹಿಳಾ ಪದವಿ ಮಹಾವಿದ್ಯಾಲಯ ಮತ್ತು ಮದರ್ ತೆರೇಸಾ ಕಲಾ ಮತ್ತು ವಾಣಿಜ್ಯ ಪದವಿ ಪೂರ್ವ ಕಾಲೇಜಿನಲ್ಲಿ ಒಳ್ಳೆಯ ಶಿಕ್ಷಣದ ಮೂಲಕ ಭವಿಷ್ಯ ರೂಪಿಸಲಾಗುತ್ತಿದೆ.

ವಿದ್ಯಾರ್ಥಿನಿಯರ ಪ್ರತಿಭೆಗಳು ಇಂತಹ ವೇದಿಕೆಗಳ ಮೂಲಕ ಹೊರ ತರಲು ಸಾಧ್ಯವಾಗುತ್ತದೆ ಎಂದರು. ಮೊದಲಿಗೆ ಪ್ರಥಮ ವರ್ಷದ ವಿದ್ಯಾರ್ಥಿನಿಯರಿಗೆ ಅದ್ದೂರಿಯಾಗಿ ಸ್ವಾಗತಿಸಲಾಯಿತು. ನಂತರ ಅರ್ಥಶಾಸ್ತ್ರ ವಿಭಾಗದಲ್ಲಿ ಚಿನ್ನದ ಪದಕ ಪಡೆದ ಇಂದ್ರಜಾಗೆ ಮತ್ತು ಮಾರ್ಗಸೂಚಕರಾದ ಉಪನ್ಯಾಸಕರಿಗೆ, ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿನಿಯರಿಗೆ, ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಸಾಧನೆ ಮಾಡಿದ ಸಾಧಕಿಯರಿಗೆ ಸನ್ಮಾನಿಸಿ ಗೌರವಿಸಲಾಯಿತು. ತದನಂತರ ರ?ಯಾಪ್ ಶೋ, ನೃತ್ಯ ಸೇರಿದಂತೆ ವಿದ್ಯಾರ್ಥಿನಿಯರ ಸಾಂಸ್ಕೃತಿಕ ಕಾರ್ಯಕ್ರಮಗಳು ಗಮನ ಸೆಳೆದವು. ಈ ಸಂದರ್ಭದಲ್ಲಿ ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರ ಸಂಘದ ಬಳ್ಳಾರಿ ಗೌರವಾಧ್ಯಕ್ಷ ಎಂ.ಶ್ರೀಶೈಲ, ಸರ್ಕಾರಿ ಬಾಲಕರ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಎನ್.ರಾಜೀವ್, ಉಪನ್ಯಾಸಕ ಬಿ.ಕುಮಾರ, ಬಿಡಿಸಿಸಿ ಕ್ಷೇತ್ರ ಅಧಿಕಾರಿ ಎನ್.ಬಾಲಪ್ಪ, ವಿವಿಎಸ್‌ಎಸ್ ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಜಿ.ಪ್ರಕಾಶ ನಾಯಕ, ಉಪ ಕಾರ್ಯದರ್ಶಿ ಬಸವರಾಜ, ಖಜಾಂಚಿ ಮಂಜುನಾಥ ತಳವಾರ, ಸದಸ್ಯರಾದ ಮಂಜಮ್ಮ ರಮೇಶ ಸುಗ್ಗೇನಹಳ್ಳಿ, ಹನುಮಂತಪ್ಪ, ಭಾಗ್ಯಮ್ಮ, ಜಯಲಕ್ಷ್ಮಿ, ಬಾಲಪ್ಪ ಎನ್, ರಾಜೇಶ್ವರಿ, ಹೆಚ್. ಮಲ್ಲಿಕಾರ್ಜುನ, ಕಾಲೇಜು ಪ್ರಾಂಶುಪಾಲ ಜಿ.ಮಹಾಬಲೇಶ್ವರಪ್ಪ, ಉಪನ್ಯಾಸಕರಾದ ಡಾ.ವಿಜಯಶಂಕರ, ಲಕ್ಷ್ಮಣನಾಯಕ, ಸುನೀತಾ, ಲೀಲಾವತಿ, ಸುರೇಶ, ಮೇಘರಾಜ್, ಉಮಾಮಹೇಶ್ವರಿ ಸೇರಿದಂತೆ ಮುಖಂಡರು, ಪೋಷಕರು, ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದರು.

ಸಾಹಿತ್ಯ ಸಿಂಚನ

ಪದಗಳಾಚೆಯ ಭಾವನೆ

ಮಾತುಗಳು ಮೌನವಾದ ಕ್ಷಣದಲ್ಲಿ,
ಮನದ ಭಾವನೆಗಳು ಮಾತನಾಡುತ್ತವೆ.
ಕಣ್ಣುಗಳ ನೋಟದ ಆಳದಲ್ಲಿ,
ಹೇಳಲಾಗದ ಕಥೆಗಳು ಮೂಡುತ್ತವೆ.

ಒಂದು ನಗು ಸಾಕಾಗುತ್ತದೆ ಕೆಲವೊಮ್ಮೆ,
ಸಾವಿರ ಮಾತುಗಳ ಅರ್ಥ ತಿಳಿಸಲು.
ಒಂದು ಮೌನ ಸಾಕಾಗುತ್ತದೆ,
ಮನದ ನೋವನ್ನು ಅರ್ಥಮಾಡಿಸಲು.

ಹೇಳಬೇಕೆಂದರೂ ಹೇಳಲಾಗದ,
ಬರೆಯಬೇಕೆಂದರೂ ಬರೆಯಲಾಗದ,
ಹೃದಯದ ಆಳದಲ್ಲಿ ಅಡಗಿರುವ,
ಒಂದು ಮಧುರವಾದ ಭಾವನೆಯಿದು.


ದೂರವಿದ್ದರೂ ಹತ್ತಿರವಾಗಿಸುವ,
ನೆನಪಿನ ದಾರಿಯಲ್ಲಿ ಜೊತೆಯಾಗುವ.
ಕಾಣದಿದ್ದರೂ ಕಾಡುವ,
ಮೌನದಲ್ಲೂ ಮನಸನ್ನು ಮುಟ್ಟುವ.

ಪದಗಳಿಗೆ ಮೀರಿದ ಈ ಭಾವನೆ,
ಕಾಲ ಕಳೆದರೂ ಮಾಸುವುದಿಲ್ಲ.
ಮೌನದ ಪುಟಗಳಲ್ಲಿ ಬರೆದ ಕಥೆ,
ಹೃದಯದಿಂದ ಎಂದಿಗೂ ಅಳಿಯುವುದಿಲ್ಲ.

ಸೇವಾ ಸಂಕಲ್ಪ ಅಭಿಯಾನದ ಅಂಗವಾಗಿ ಸಸಿ ನೆಡುವ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

ಇಳಕಲ್: ದೇಶದ ಹೆಮ್ಮೆಯ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರ ಜನ್ಮದಿನದ ಪ್ರಯುಕ್ತ ಹಮ್ಮಿಕೊಂಡಿರುವ ಸೇವಾ ಸಂಕಲ್ಪ ಅಭಿಯಾನದ ಅಂಗವಾಗಿ ಸಸಿ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.



ಕಾರ್ಯಕ್ರಮವನ್ನು ಉದ್ಘಾಟಿಸಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಹುನಗುಂದ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕರಾದ ಶ್ರೀ ದೊಡ್ಡನಗೌಡ ಜಿ. ಪಾಟೀಲ ಅವರು, ಪರಿಸರ ಸಂರಕ್ಷಣೆಯಲ್ಲಿ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆ ನೀಡಬೇಕು. ಸಸಿಗಳನ್ನು ನೆಟ್ಟು ಅವುಗಳನ್ನು ಪೋಷಿಸುವ ಮೂಲಕ ಮುಂದಿನ ಪೀಳಿಗೆಗೆ ಹಸಿರು ಪರಿಸರವನ್ನು ಉಳಿಸಿಕೊಡಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ನಂತರ ಶ್ರೀ ದೊಡ್ಡನಗೌಡ ಜಿ. ಪಾಟೀಲ ಅವರು ಸಸಿ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಕಾರ್ಯವೈಖರಿ ಹಾಗೂ ದೇಶದ ಅಭಿವೃದ್ಧಿಗಾಗಿ ಕೈಗೊಂಡಿರುವ ವಿವಿಧ ಕಾರ್ಯಕ್ರಮಗಳ ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿದರು. ಈ ಸಂದರ್ಭದಲ್ಲಿ ವಿ.ಎಂ.ವಿ.ವಿ. ಸಂಘದ ಗೌರವಾಧ್ಯಕ್ಷರಾದ ಡಾ. ಮಹಾಂತೇಶ ಕಡಪಟ್ಟಿ, ಶ್ರೀ ಸಂಗಣ್ಣ ಚಿನಿವಾಳರ, ಶ್ರೀ ಅಜ್ಜಪ್ಪಗೌಡ ನಾಡಗೌಡ, ಶ್ರೀ ಸಂಗಣ್ಣ ಹೊಸೂರ, ವಸ್ತ್ರದ ಕಾಲೇಜಿನ ಪ್ರಾಂಶುಪಾಲರು, ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ರೈತರ ಕೃಷಿ ಚಟುವಟಿಕೆಗಳಿಗೆ ಮತ್ತಷ್ಟು ಉತ್ತೇಜನ: ಶಾಸಕ ಹಂಪನಗೌಡ ಬಾದರ್ಲಿ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ತಾಲೂಕಿನ ವಲ್ಕಂದಿನ್ನಿ ಗ್ರಾಮದಲ್ಲಿ ಕರ್ನಾಟಕ ಸರ್ಕಾರದ ಕೃಷಿ ಇಲಾಖೆಯ ಅನುದಾನದಡಿ ?2 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ ರೈತ ಸಂಪರ್ಕ ಕೇಂದ್ರಕ್ಕೆ ಮಾನ್ಯ ಶಾಸಕ ಶ್ರೀ ಹಂಪನಗೌಡ ಬಾದರ್ಲಿ ಅವರು ಇಂದು ಶಂಕುಸ್ಥಾಪನೆ ನೆರವೇರಿಸಿದರು.







ಗ್ರಾಮೀಣ ಭಾಗದ ರೈತರಿಗೆ ಕೃಷಿ ಇಲಾಖೆಯ ವಿವಿಧ ಯೋಜನೆಗಳು, ಸೌಲಭ್ಯಗಳು ಹಾಗೂ ತಾಂತ್ರಿಕ ಮಾಹಿತಿಗಳು ಸುಲಭವಾಗಿ ದೊರೆಯುವಂತೆ ಮಾಡುವ ಉದ್ದೇಶದಿಂದ ರೈತ ಸಂಪರ್ಕ ಕೇಂದ್ರಗಳನ್ನು ನಿರ್ಮಿಸಲಾಗುತ್ತಿದೆ. ವಲ್ಕಂದಿನ್ನಿಯಲ್ಲಿ ನೂತನ ರೈತ ಸಂಪರ್ಕ ಕೇಂದ್ರ ನಿರ್ಮಾಣವಾಗುತ್ತಿರುವುದು ಸುತ್ತಮುತ್ತಲಿನ ಗ್ರಾಮಗಳ ರೈತರಿಗೆ ಅನುಕೂಲವಾಗಲಿದೆ. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಹಂಪನಗೌಡ ಬಾದರ್ಲಿ ಅವರು, ರೈತರು ದೇಶದ ಅನ್ನದಾತರಾಗಿದ್ದು, ಕೃಷಿ ಕ್ಷೇತ್ರದ ಅಭಿವೃದ್ಧಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದೆ ಎಂದು ಹೇಳಿದರು. ರೈತರಿಗೆ ಕೃಷಿ ಇಲಾಖೆಯ ಸೌಲಭ್ಯಗಳು, ವಿವಿಧ ಸರ್ಕಾರಿ ಯೋಜನೆಗಳ ಮಾಹಿತಿ, ಕೃಷಿ ತಾಂತ್ರಿಕ ಮಾರ್ಗದರ್ಶನ ಹಾಗೂ ಅಗತ್ಯ ಸೇವೆಗಳು ಸ್ಥಳೀಯ ಮಟ್ಟದಲ್ಲಿಯೇ ದೊರೆಯುವಂತಾಗಬೇಕು ಎಂಬ ಉದ್ದೇಶದಿಂದ ರೈತ ಸಂಪರ್ಕ ಕೇಂದ್ರ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು. ?2 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ ಈ ಕೇಂದ್ರವು ವಲ್ಕಂದಿನ್ನಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ರೈತರಿಗೆ ಕೃಷಿ ಸಂಬಂಧಿತ ಸೇವೆಗಳನ್ನು ತ್ವರಿತವಾಗಿ ಪಡೆಯಲು ಸಹಕಾರಿಯಾಗಲಿದೆ. ಇದರಿಂದ ರೈತರು ಕೃಷಿ ಇಲಾಖೆಯ ಕಚೇರಿಗಳಿಗೆ ದೂರದ ಪ್ರಯಾಣ ಮಾಡುವ ಅಗತ್ಯ ಕಡಿಮೆಯಾಗಲಿದ್ದು, ಸ್ಥಳೀಯವಾಗಿಯೇ ಹಲವು ಸೌಲಭ್ಯಗಳು ದೊರೆಯುವಂತಾಗಲಿದೆ. ಕೃಷಿ ಕ್ಷೇತ್ರದಲ್ಲಿ ಹೊಸ ತಂತ್ರಜ್ಞಾನಗಳ ಬಳಕೆ, ವೈಜ್ಞಾನಿಕ ಕೃಷಿ ಪದ್ಧತಿಗಳು, ಬೆಳೆ ನಿರ್ವಹಣೆ, ಬೀಜ, ರಸಗೊಬ್ಬರ, ಕೀಟ ನಿಯಂತ್ರಣ, ಕೃಷಿ ಯಂತ್ರೋಪಕರಣಗಳು ಹಾಗೂ ಸರ್ಕಾರದ ವಿವಿಧ ಕೃಷಿ ಯೋಜನೆಗಳ ಕುರಿತು ರೈತರಿಗೆ ಮಾರ್ಗದರ್ಶನ ನೀಡುವಲ್ಲಿ ರೈತ ಸಂಪರ್ಕ ಕೇಂದ್ರಗಳು ಪ್ರಮುಖ ಪಾತ್ರ ವಹಿಸುತ್ತವೆ. ಈ ಹಿನ್ನೆಲೆಯಲ್ಲಿ ವಲ್ಕಂದಿನ್ನಿಯಲ್ಲಿ ನಿರ್ಮಾಣವಾಗಲಿರುವ ನೂತನ ಕೇಂದ್ರವು ರೈತರಿಗೆ ಉಪಯುಕ್ತವಾಗಲಿದೆ ಎಂದು ಅವರು ಹೇಳಿದರು.

ರೈತರ ಆರ್ಥಿಕ ಸ್ಥಿತಿಯನ್ನು ಬಲಪಡಿಸುವುದು, ಕೃಷಿ ಉತ್ಪಾದಕತೆ ಹೆಚ್ಚಿಸುವುದು ಹಾಗೂ ಗ್ರಾಮೀಣ ಪ್ರದೇಶದ ಕೃಷಿ ಮೂಲಸೌಕರ್ಯವನ್ನು ಸುಧಾರಿಸುವ ನಿಟ್ಟಿನಲ್ಲಿ ಸರ್ಕಾರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಶಾಸಕ ಹಂಪನಗೌಡ ಬಾದರ್ಲಿ ತಿಳಿಸಿದರು. ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳು, ಜನಪ್ರತಿನಿಧಿಗಳು, ಮುಖಂಡರು, ಗ್ರಾಮಸ್ಥರು, ರೈತರು ಹಾಗೂ ವಿವಿಧ ಇಲಾಖೆಗಳ ಸಿಬ್ಬಂದಿ ಉಪಸ್ಥಿತರಿದ್ದರು. ಗ್ರಾಮದಲ್ಲಿ ?2 ಕೋಟಿ ವೆಚ್ಚದ ರೈತ ಸಂಪರ್ಕ ಕೇಂದ್ರ ನಿರ್ಮಾಣಕ್ಕೆ ಚಾಲನೆ ದೊರೆತಿರುವುದಕ್ಕೆ ರೈತರು ಹಾಗೂ ಗ್ರಾಮಸ್ಥರು ಸಂತಸ ವ್ಯಕ್ತಪಡಿಸಿ, ಶಾಸಕರಿಗೆ ಅಭಿನಂದನೆ ಸಲ್ಲಿಸಿದರು.

ನೂತನ ರೈತ ಸಂಪರ್ಕ ಕೇಂದ್ರವು ಶೀಘ್ರವಾಗಿ ನಿರ್ಮಾಣಗೊಂಡು ರೈತರ ಸೇವೆಗೆ ಲಭ್ಯವಾಗುವ ಮೂಲಕ ವಲ್ಕಂದಿನ್ನಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಕೃಷಿ ಚಟುವಟಿಕೆಗಳಿಗೆ ಮತ್ತಷ್ಟು ಬಲ ನೀಡಲಿ ಎಂಬ ಆಶಯ ಈ ಸಂದರ್ಭದಲ್ಲಿ ವ್ಯಕ್ತವಾಯಿತು.

ಅಂತರಾಷ್ಟ್ರೀಯ ಹಾವು ಕಡಿತ ಜಾಗೃತಿ ದಿನಾಚರಣೆ ಆಚರಣೆ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಸಮೀಪದ ಆರೋಗ್ಯ ಮತ್ತು ಕ್ಷೇಮ ಮಂದಿರ ಅರಗಿನ ಮರ ಕ್ಯಾಂಪ್‌ನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಇವರ ಸಂಯುಕ್ತ ಆಶ್ರಯದಲ್ಲಿ ಅಂತರಾಷ್ಟ್ರೀಯ ಹಾವು ಕಡಿತ ಜಾಗೃತಿ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.



ಕಾರ್ಯಕ್ರಮದಲ್ಲಿ ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ, ವಿಶ್ವ ಆರೋಗ್ಯ ಸಂಸ್ಥೆಯ ವರದಿಯ ಪ್ರಕಾರ ಪ್ರತಿ ವರ್ಷ ಸುಮಾರು 54 ಲಕ್ಷ ಜನರು ಹಾವು ಕಡಿತಕ್ಕೆ ಒಳಗಾಗುತ್ತಿದ್ದು, 80 ಸಾವಿರಕ್ಕೂ ಹೆಚ್ಚು ಜನರು ಜೀವ ಕಳೆದುಕೊಳ್ಳುತ್ತಿದ್ದಾರೆ ಎಂದು ತಿಳಿಸಿದರು. ಬದುಕುಳಿದ ಅನೇಕರು ಜೀವನಪರ್ಯಂತ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ ಎಂದರು.

ಹಾವು ಕಡಿತವನ್ನು ತಡೆಗಟ್ಟಲು ಹುಲ್ಲುಗಾವಲು ಪ್ರದೇಶಗಳಲ್ಲಿ ಕೆಲಸ ಮಾಡುವಾಗ ಬೂಟುಗಳನ್ನು ಧರಿಸುವುದು, ರಾತ್ರಿ ವೇಳೆ ಹೊರಗಡೆ ಹೋಗುವಾಗ ಟಾರ್ಚ್ ಬಳಸುವುದು ಹಾಗೂ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಅಗತ್ಯ ಎಂದು ಹೇಳಿದರು. ಹಾವು ಕಚ್ಚಿದರೆ ಯಾವುದೇ ರೀತಿಯ ಮೂಢನಂಬಿಕೆಗಳಿಗೆ ಒಳಗಾಗದೆ ತಕ್ಷಣವೇ ಸಮೀಪದ ಆರೋಗ್ಯ ಕೇಂದ್ರಕ್ಕೆ ತೆರಳಿ ವೈದ್ಯಕೀಯ ಚಿಕಿತ್ಸೆ ಪಡೆಯಬೇಕು.

ಸಮಯಕ್ಕೆ ಸರಿಯಾಗಿ ವಿಷನಿರೋಧಕ ಚುಚ್ಚುಮದ್ದು (ಆಂಟಿ ಸ್ನೇಕ್ ವೆನಮ್) ನೀಡುವುದರಿಂದ ಜೀವವನ್ನು ಉಳಿಸಬಹುದಾಗಿದೆ ಎಂದು ತಿಳಿಸಿದರು. ನಂತರ ಮಾತನಾಡಿದ ಸಮುದಾಯ ಆರೋಗ್ಯ ಅಧಿಕಾರಿಗಳಾದ ಮೇರಿ, ಹಾವು ಕಚ್ಚಿದ ಸಂದರ್ಭದಲ್ಲಿ ಯಾರೂ ಸಹ ಮೂಢನಂಬಿಕೆಗಳಿಗೆ ಬಲಿಯಾಗದೆ ಕೂಡಲೇ ವೈದ್ಯಕೀಯ ಸಲಹೆ ಪಡೆದು ಸೂಕ್ತ ಚಿಕಿತ್ಸೆ ಪಡೆಯಬೇಕು ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ಸಿಬ್ಬಂದಿ ವರ್ಗದವರಿಗೆ ಆರೋಗ್ಯ ಮತ್ತು ಮಾಹಿತಿ ಶಿಕ್ಷಣ ಮತ್ತು ಸಂವಹನ ನೀಡಲಾಯಿತು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ನಿಂಗಮ್ಮ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಮಹೇಶ್ ಮತ್ತು ಉದಯಕುಮಾರ, ಆಶಾ ಕಾರ್ಯಕರ್ತೆಯರಾದ ಮಹೇಶ್ವರಿ, ಸುಜಾತ, ಹುಲಿಗೆಮ್ಮ . ಈರಮ್ಮ ಹಾಗೂ ಮಾಲಾಶ್ರೀ, ಅಂಗನವಾಡಿ ಕಾರ್ಯಕರ್ತೆಯರಾದ ಬಸವಂತಮ್ಮ ಸೇರಿದಂತೆ ಇತರರು ಉಪಸ್ಥಿತರಿದ್ದರು

ಪುಟ್ಟರಾಜ ಕವಿ ಗವಾಯಿಗಳವರ 17ನೇ ಪುಣ್ಯಸ್ಮರಣೆ

❑ ನೈಜ್ಯ ದೆಸೆ ನ್ಯೂಸ್

ಯಲಬುರ್ಗಾ: ತಾಲೂಕಿನ ತರಲಕಟ್ಟಿ ಗ್ರಾಮದಲ್ಲಿ ಗಾನಯೋಗಿ ಡಾ. ಪಂಡಿತ್ ಪುಟ್ಟರಾಜ ಕವಿ ಗವಾಯಿಗಳವರ 17ನೇ ವರ್ಷದ ಪುಣ್ಯಸ್ಮರಣೆ ಹಾಗೂ ಅನ್ನದಾಸೋಹ ಕಾರ್ಯಕ್ರಮ ಭಕ್ತಿಭಾವದಿಂದ ನಡೆಯಿತು.



ಕಾರ್ಯಕ್ರಮದ ಸಾನಿಧ್ಯವನ್ನು ಮಕ್ಕಳಿ ಶ್ರೀ ಶಿವಾನಂದ ಮಹಾಸ್ವಾಮಿಗಳು ವಹಿಸಿದ್ದರು. ಪುಟ್ಟರಾಜ ಕವಿ ಗವಾಯಿಗಳವರ ಶಿಷ್ಯರಾದ ವೇದಮೂರ್ತಿ ವಿರೂಪಾಕ್ಷಯ್ಯ ಸ್ವಾಮಿಗಳು, ಕಲಬಾವಿಯ ಶ್ರೀ ಶಂಕ್ರಪ್ಪ ವನಗಡ್ಡಿ ಶಾಸ್ತ್ರಿಗಳು ಅವರನ್ನು ಪುಟ್ಟರಾಜ ಕವಿ ಗವಾಯಿಗಳವರ ಕಮಿಟಿ ವತಿಯಿಂದ ಸನ್ಮಾನಿಸಿ, ಉಡುಗೊರೆ ಹಾಗೂ ಗೌರವ ಕಾಣಿಕೆ ನೀಡಿ ಗೌರವಿಸಲಾಯಿತು. ನಂತರ ಪುಟ್ಟರಾಜ ಕವಿ ಗವಾಯಿಗಳವರ ಶಿಷ್ಯರಾದ ತಬಲಾವಾದಕರಾದ ಶ್ರೀ ಶರಣಕುಮಾರ ಬಂಡಿ, ಶ್ರೀ ದೇವೇಂದ್ರಕುಮಾರ, ಸುಖಮುನಿ ಹಾಗೂ ಹನುಮಂತಪ್ಪ ಜಾಲಿಗಿಡದ ಅವರಿಂದ ಸಂಗೀತ ಕಾರ್ಯಕ್ರಮ ನಡೆಯಿತು. ಹಿರೇ ಅರಳಹಳ್ಳಿ ಭಜನಾ ಸಂಘ, ಮುರುಡಿ ಗ್ರಾಮದ ಭಜನಾ ಸಂಘ ಹಾಗೂ ಯಾಪಲದಿನ್ನಿ ಗ್ರಾಮದ ಭಜನಾ ಸಂಘದ ವತಿಯಿಂದ ಭಜನೆ?ತ್ಸವ ಜರುಗಿತು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಮಕ್ಕಳಿ ಶ್ರೀ ಶಿವಾನಂದ ಮಹಾಸ್ವಾಮಿಗಳು, "ಡಾ. ಪಂಡಿತ್ ಪುಟ್ಟರಾಜ ಕವಿ ಗವಾಯಿಗಳು ವೀರೇಶ್ವರ ಪುಣ್ಯಾಶ್ರಮದ ಒಡೆಯರಾಗಿ ತಮ್ಮ ಶಿಷ್ಯವೃಂದಕ್ಕೆ ಭಿಕ್ಷೆ ಪಾತ್ರೆಯನ್ನು ನೀಡದೆ ಅಕ್ಷಯ ಪಾತ್ರೆಯನ್ನು ನೀಡಿದ ಧೀಮಂತ ಗಾನಗಂಧರ್ವರಾಗಿದ್ದರು. ಅವರು ನಿಜವಾಗಿ ನಡೆದಾಡುವ ದೇವರಾಗಿ, ಈ ಕಾಲದ ಮಾನವ ರೂಪದ ದೇವರಾಗಿದ್ದರು" ಎಂದು ಸ್ಮರಿಸಿದರು.

ಪುಟ್ಟರಾಜ ಕವಿ ಗವಾಯಿಗಳು ಅಪಾರ ಶಿಷ್ಯವೃಂದವನ್ನು ಹೊಂದಿದ್ದರು. ಅವರು ಲೋಕವನ್ನು ತ್ಯಜಿಸಿದರೂ ಅವರ ಸ್ಮರಣೆ, ಆದರ್ಶ ಹಾಗೂ ತತ್ವಗಳು ಸದಾ ನಮ್ಮೊಂದಿಗೆ ಜೀವಂತವಾಗಿವೆ. ಅವರ ಆದರ್ಶಗಳನ್ನು ಮುಂದಿನ ಪೀಳಿಗೆಗೂ ಕೊಂಡೊಯ್ಯುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಹೇಳಿದರು. ಗ್ರಾಮದ ಎಂ.ಎನ್. ಜನದ್ರಿ ಅವರು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಹಿರಿಯರಾದ ತೇಜನಗೌಡ ಪೊಲೀಸ್ ಪಾಟೀಲ್, ಪ್ರಭುಗೌಡ ಪೊಲೀಸ್ ಪಾಟೀಲ್, ಯಮನೂರಪ್ಪ ಕಂಬಳಿ, ಸರಕಾರಿ ವಕೀಲ ಮಲ್ಲನಗೌಡ ಪಾಟೀಲ್, ವೀರಪ್ಪನಗೌಡ ಪಾಟೀಲ್, ಅನಿಲ್ ಬಡಿಗೇರ್, ಯಮನಪ್ಪ ಗೊಂದಿ, ದೊಡ್ಡನಗೌಡ ಮಾಲಿಪಾಟೀಲ್, ಹನುಮಂತಪ್ಪ ಕನಕಗಿರಿ, ಗುನ್ನಪ್ಪದಾಸರ್, ಶರಣಪ್ಪ ಬಡಿಗಿ, ಹನುಮೇಶ್ ಹಳ್ಳಿ, ನಾಗಪ್ಪ ಪೂಜಾರ್, ನಿಂಗಪ್ಪ ಮೇಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವಲ್ಕಂದಿನ್ನಿಯಲ್ಲಿ ನೂತನ ರೈತ ಸಂಪರ್ಕ ಕೇಂದ್ರಕ್ಕೆ ಶಂಕುಸ್ಥಾಪನೆ

ರೈತರಿಗೆ ಸರ್ಕಾರಿ ಕೃಷಿ ಸೇವೆಗಳು ಇನ್ನಷ್ಟು ಹತ್ತಿರ – ಬಸನಗೌಡ ಬಾದರ್ಲಿ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಧಿ (RIDF–31) ಯೋಜನೆಯಡಿ ಸಿಂಧನೂರು ತಾಲೂಕಿನ ವಲ್ಕಂದಿನ್ನಿ ಗ್ರಾಮದ ರೈತ ಸಂಪರ್ಕ ಕೇಂದ್ರದ ಆವರಣದಲ್ಲಿ ನೂತನ ರೈತ ಸಂಪರ್ಕ ಕೇಂದ್ರದ ಕಟ್ಟಡ ನಿರ್ಮಾಣಕ್ಕೆ ವಿಧಾನ ಪರಿಷತ್ ಶಾಸಕರಾದ ಶ್ರೀ ಬಸನಗೌಡ ಬಾದರ್ಲಿ ಅವರು ಶಂಕುಸ್ಥಾಪನೆ ನೆರವೇರಿಸಿದರು.



ಕೃಷಿ ಪ್ರಧಾನ ಪ್ರದೇಶವಾಗಿರುವ ಸಿಂಧನೂರು ತಾಲೂಕಿನಲ್ಲಿ ರೈತರಿಗೆ ಅಗತ್ಯವಿರುವ ಕೃಷಿ ಇಲಾಖೆಯ ಸೇವೆಗಳು, ಮಾಹಿತಿ ಹಾಗೂ ಮಾರ್ಗದರ್ಶನವನ್ನು ಸ್ಥಳೀಯವಾಗಿಯೇ ಒದಗಿಸುವ ಉದ್ದೇಶದಿಂದ ರೈತ ಸಂಪರ್ಕ ಕೇಂದ್ರಗಳು ಮಹತ್ವದ ಪಾತ್ರ ವಹಿಸುತ್ತಿವೆ. ಈ ಹಿನ್ನೆಲೆಯಲ್ಲಿ ವಲ್ಕಂದಿನ್ನಿಯಲ್ಲಿ ನೂತನ ಕಟ್ಟಡ ನಿರ್ಮಾಣಗೊಳ್ಳುತ್ತಿರುವುದು ಸುತ್ತಮುತ್ತಲಿನ ಗ್ರಾಮಗಳ ರೈತರಿಗೆ ಅನುಕೂಲವಾಗಲಿದೆ ಎಂಬ ನಿರೀಕ್ಷೆ ವ್ಯಕ್ತವಾಗಿದೆ. ಶಂಕುಸ್ಥಾಪನೆ ನೆರವೇರಿಸಿದ ಬಳಿಕ ಮಾತನಾಡಿದ ಶ್ರೀ ಬಸನಗೌಡ ಬಾದರ್ಲಿ ಅವರು, ರೈತರು ಕೃಷಿ ಕ್ಷೇತ್ರದಲ್ಲಿ ಎದುರಿಸುತ್ತಿರುವ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವುದು ಹಾಗೂ ಕೃಷಿ ಇಲಾಖೆಯ ವಿವಿಧ ಯೋಜನೆಗಳು ಮತ್ತು ಸೌಲಭ್ಯಗಳು ಅರ್ಹ ರೈತರಿಗೆ ತಲುಪುವಂತೆ ಮಾಡುವುದು ಅಗತ್ಯವಾಗಿದೆ ಎಂದು ಹೇಳಿದರು. ರೈತ ಸಂಪರ್ಕ ಕೇಂದ್ರಗಳು ರೈತರು ಮತ್ತು ಕೃಷಿ ಇಲಾಖೆಯ ನಡುವಿನ ಪ್ರಮುಖ ಸಂಪರ್ಕ ಕೊಂಡಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಉತ್ತಮ ಮೂಲಸೌಕರ್ಯ ಹೊಂದಿರುವ ಕಟ್ಟಡದಿಂದ ರೈತರಿಗೆ ಇನ್ನಷ್ಟು ಅನುಕೂಲವಾಗಲಿದೆ ಎಂದು ತಿಳಿಸಿದರು.

ರೈತರಿಗೆ ಒಂದೇ ಸೂರಿನಡಿ ಕೃಷಿ ಸೇವೆಗಳು ರೈತ ಸಂಪರ್ಕ ಕೇಂದ್ರಗಳ ಮೂಲಕ ರೈತರಿಗೆ ಕೃಷಿ ತಾಂತ್ರಿಕ ಮಾಹಿತಿ, ಬೆಳೆ ಪದ್ಧತಿ, ಕೃಷಿ ಇಲಾಖೆಯ ಯೋಜನೆಗಳು, ಬೀಜ, ರಸಗೊಬ್ಬರ, ಕೃಷಿ ಪರಿಕರಗಳು ಹಾಗೂ ಸರ್ಕಾರದ ವಿವಿಧ ಸೌಲಭ್ಯಗಳ ಕುರಿತು ಮಾಹಿತಿ ಮತ್ತು ಮಾರ್ಗದರ್ಶನ ದೊರೆಯುತ್ತದೆ. ನೂತನ ಕಟ್ಟಡ ನಿರ್ಮಾಣಗೊಂಡ ಬಳಿಕ ರೈತರು ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಸುಲಭವಾಗಿ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆಯಲು ಅನುಕೂಲವಾಗಲಿದೆ.

ಸಿಂಧನೂರು ತಾಲೂಕಿನ ಕೃಷಿ ಕ್ಷೇತ್ರದ ಬೆಳವಣಿಗೆಗೆ ರೈತ ಸಂಪರ್ಕ ಕೇಂದ್ರಗಳ ಬಲವರ್ಧನೆ ಅಗತ್ಯವಾಗಿದ್ದು, ಗ್ರಾಮೀಣ ಪ್ರದೇಶದಲ್ಲಿ ಉತ್ತಮ ಮೂಲಸೌಕರ್ಯ ನಿರ್ಮಿಸುವ ಮೂಲಕ ರೈತರ ಸೇವೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿಸುವ ನಿಟ್ಟಿನಲ್ಲಿ ಈ ಕಾಮಗಾರಿ ಮಹತ್ವ ಪಡೆದಿದೆ.

ಗ್ರಾಮೀಣ ಮೂಲಸೌಕರ್ಯಕ್ಕೆ ಆದ್ಯತೆ ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಯಲ್ಲಿ ರಸ್ತೆ, ನೀರು, ಕೃಷಿ, ಶಿಕ್ಷಣ, ಆರೋಗ್ಯ ಹಾಗೂ ವಿವಿಧ ಸಾರ್ವಜನಿಕ ಸೇವೆಗಳ ಮೂಲಸೌಕರ್ಯ ಪ್ರಮುಖ ಪಾತ್ರ ವಹಿಸುತ್ತದೆ. ಈ ಹಿನ್ನೆಲೆಯಲ್ಲಿ ಖಐಆಈ–31 ಯೋಜನೆಯಡಿ ಕೈಗೊಳ್ಳಲಾಗುತ್ತಿರುವ ಕಾಮಗಾರಿಗಳು ಗ್ರಾಮೀಣ ಪ್ರದೇಶದ ಮೂಲಸೌಕರ್ಯವನ್ನು ಬಲಪಡಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿವೆ.

ವಲ್ಕಂದಿನ್ನಿಯಲ್ಲಿ ನಿರ್ಮಾಣಗೊಳ್ಳಲಿರುವ ರೈತ ಸಂಪರ್ಕ ಕೇಂದ್ರದ ಕಟ್ಟಡವು ಸುತ್ತಮುತ್ತಲಿನ ರೈತರಿಗೆ ಕೃಷಿ ಸಂಬಂಧಿತ ಸೇವೆಗಳನ್ನು ಸುಲಭವಾಗಿ ಪಡೆಯಲು ಅನುಕೂಲ ಕಲ್ಪಿಸುವುದರ ಜೊತೆಗೆ, ಕೃಷಿ ಇಲಾಖೆಯ ಯೋಜನೆಗಳನ್ನು ರೈತರ ಮನೆ ಬಾಗಿಲಿಗೆ ತಲುಪಿಸುವ ಕಾರ್ಯಕ್ಕೆ ಮತ್ತಷ್ಟು ವೇಗ ನೀಡುವ ನಿರೀಕ್ಷೆಯಿದೆ.

ರೈತರ ಸಮಸ್ಯೆಗಳಿಗೆ ಸ್ಪಂದಿಸುವ ಸಂಕಲ್ಪ ರೈತರ ಸಮಸ್ಯೆಗಳಿಗೆ ಆದ್ಯತೆ ನೀಡಿ, ಕೃಷಿ ಕ್ಷೇತ್ರಕ್ಕೆ ಅಗತ್ಯವಿರುವ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸುವುದು ಅತ್ಯಂತ ಮುಖ್ಯವಾಗಿದೆ. ಕೃಷಿ ಕ್ಷೇತ್ರದಲ್ಲಿ ಹೊಸ ತಂತ್ರಜ್ಞಾನ, ವೈಜ್ಞಾನಿಕ ಕೃಷಿ ಪದ್ಧತಿ ಹಾಗೂ ಸರ್ಕಾರದ ವಿವಿಧ ಯೋಜನೆಗಳ ಕುರಿತು ರೈತರಿಗೆ ಸೂಕ್ತ ಮಾರ್ಗದರ್ಶನ ದೊರೆತರೆ ಉತ್ಪಾದಕತೆ ಹೆಚ್ಚಿಸಲು ಸಹಕಾರಿಯಾಗಲಿದೆ. ವಲ್ಕಂದಿನ್ನಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ರೈತರು ನೂತನ ರೈತ ಸಂಪರ್ಕ ಕೇಂದ್ರದ ಕಟ್ಟಡ ನಿರ್ಮಾಣದಿಂದ ಕೃಷಿ ಇಲಾಖೆಯ ಸೇವೆಗಳನ್ನು ಇನ್ನಷ್ಟು ಸುಲಭವಾಗಿ ಪಡೆದುಕೊಳ್ಳಲು ಸಾಧ್ಯವಾಗಲಿದೆ ಎಂದು ಆಶಾಭಾವನೆ ವ್ಯಕ್ತಪಡಿಸಿದರು. ನೂತನ ಕಟ್ಟಡ ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವುದರ ಜೊತೆಗೆ ಗುಣಮಟ್ಟವನ್ನು ಕಾಪಾಡಿಕೊಳ್ಳಬೇಕು. ಸಾರ್ವಜನಿಕರ ಹಣದಿಂದ ನಡೆಯುವ ಪ್ರತಿಯೊಂದು ಅಭಿವೃದ್ಧಿ ಕಾಮಗಾರಿಯೂ ಜನರಿಗೆ ದೀರ್ಘಕಾಲ ಉಪಯೋಗವಾಗುವಂತಿರಬೇಕು ಎಂಬ ಆಶಯವನ್ನು ಈ ಸಂದರ್ಭದಲ್ಲಿ ವ್ಯಕ್ತಪಡಿಸಲಾಯಿತು.

ವಲ್ಕಂದಿನ್ನಿ ಗ್ರಾಮದಲ್ಲಿ ನೂತನ ರೈತ ಸಂಪರ್ಕ ಕೇಂದ್ರಕ್ಕೆ ಶಂಕುಸ್ಥಾಪನೆ ನೆರವೇರಿಸಿರುವುದು ಗ್ರಾಮೀಣ ಭಾಗದ ಕೃಷಿ ಮೂಲಸೌಕರ್ಯ ಅಭಿವೃದ್ಧಿಯ ದೃಷ್ಟಿಯಿಂದ ಮಹತ್ವದ ಹೆಜ್ಜೆಯಾಗಿದ್ದು, ರೈತರ ಸೇವೆ, ಕೃಷಿಯ ಪ್ರಗತಿ ಹಾಗೂ ಗ್ರಾಮೀಣ ಅಭಿವೃದ್ಧಿಗೆ ಮತ್ತಷ್ಟು ಬಲ ನೀಡುವ ನಿರೀಕ್ಷೆ ಮೂಡಿಸಿದೆ. ಈ ಸಂದರ್ಭದಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳು, ಸ್ಥಳೀಯ ಮುಖಂಡರು, ರೈತರು, ಗ್ರಾಮಸ್ಥರು ಹಾಗೂ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

ತಂದೆಯ ಕೈಯಲ್ಲಿ ಕಾಯಕ ಮಗಳ ಕೈಯಲ್ಲಿ ಪುಸ್ತಕ

ತಂದೆಯ ಬೆವರಿನ ಪ್ರತಿಯೊಂದು ಹನಿಯೂ ಮಗಳ ಭವಿಷ್ಯದ ಬೆಳಕಿಗಾಗಿ

❑ ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ತಂದೆ ಬಡಗಿತನದ ಕಾಯಕದಲ್ಲಿ ತೊಡಗಿಸಿಕೊಂಡಿದ್ದರೆ, ಅದೇ ಸ್ಥಳದಲ್ಲಿ ಪಕ್ಕಕ್ಕೆ ಕುಳಿತು ಮಗಳು ಪುಸ್ತಕ ಹಿಡಿದು ಓದುತ್ತಿರುವ ದೃಶ್ಯ ಮನಮಿಡಿಯುವಂತಿದೆ.

ಕುಷ್ಟಗಿ ತಾಲೂಕಿನ ಕಡೇಕೊಪ್ಪ ಗ್ರಾಮದ ಮೂಲದ ಸುರೇಶ ಬಡಿಗೇರ ಅವರು ಕುಷ್ಟಗಿ ಪಟ್ಟಣದಲ್ಲಿ ಬಡಗಿತನ ವೃತ್ತಿ ಮಾಡಿಕೊಂಡು ಕುಟುಂಬ ನಿರ್ವಹಿಸುತ್ತಿದ್ದಾರೆ. ಕಷ್ಟಪಟ್ಟು ದುಡಿಯುತ್ತಿರುವ ಅವರು, ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒಲವು ತೋರುತ್ತಿದ್ದಾರೆ. ಅವರ ಪುತ್ರಿ ಕೀರ್ತಿ ಬಡಿಗೇರ ಕುಷ್ಟಗಿಯ ಗ್ಲೋಬಲ್ ಕಿಡ್ಸ್ ಶಾಲೆಯಲ್ಲಿ ನಾಲ್ಕನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದಾಳೆ. ತಂದೆಯ ಕೈಯಲ್ಲಿ ಕೆಲಸ, ಮಗಳ ಕೈಯಲ್ಲಿ ಪುಸ್ತಕ; ತಂದೆಯ ಬೆವರಿನ ಪ್ರತಿಯೊಂದು ಹನಿಯೂ ಮಗಳ ಭವಿಷ್ಯದ ಬೆಳಕಿಗಾಗಿ.

ತಂದೆ ನಮ್ಮ ಶಿಕ್ಷಣಕ್ಕಾಗಿ ಹಗಲಿರುಳು



ದುಡಿಯುತ್ತಿದ್ದಾರೆ. ತಾವು ಕಷ್ಟದಲ್ಲಿದ್ದರೂ ಮಕ್ಕಳಿಗೆ ಎಂದಿಗೂ ಕಷ್ಟದ ಅರಿವು ಮೂಡಿಸದೆ, ಉತ್ತಮ ಶಿಕ್ಷಣ ನೀಡಬೇಕು ಎಂಬ ಆಶಯ ಹೊಂದಿದ್ದಾರೆ. ಇದನ್ನು ಅರಿತ ಕೀರ್ತಿ, “ನಮಗಾಗಿ ನಮ್ಮ ತಂದೆ ಇಷ್ಟೊಂದು ಕಷ್ಟಪಡುತ್ತಿದ್ದಾರೆ. ಅವರ ಕಾಯಕದ ಸ್ಥಳದಲ್ಲೇ ನಾನು ಕುಳಿತು ಓದಿದರೆ ತಂದೆಗೂ ಸಂತೋಷ, ನನಗೂ ಸಂತೋಷ” ಎಂಬ ಭಾವನೆಯಿಂದ ತಂದೆಯ ಕೆಲಸದ ಸ್ಥಳದಲ್ಲೇ ಅಭ್ಯಾಸ ಮಾಡುತ್ತಾ ಸಮಯ ಕಳೆಯುತ್ತಿದ್ದಾಳೆ.

ತಂದೆ ಬಡಗಿತನದ ಕಾಯಕದಲ್ಲಿ ನಿರತರಾಗಿರುವಾಗ, ಮಗಳು ಪಕ್ಕದಲ್ಲೇ ಪುಸ್ತಕ ತೆರೆದು ವಿದ್ಯಾಭ್ಯಾಸ ಮಾಡುತ್ತಿರುವ ಈ ದೃಶ್ಯ ಕಾಯಕದ ಗೌರವ ಹಾಗೂ ಶಿಕ್ಷಣದ ಮಹತ್ವವನ್ನು ಸಾರುವಂತಿದೆ. ಬೆವರಿನ ನಡುವೆ ಭರವಸೆಯ ಬೆಳಕು ತಂದೆಯ ಬೆವರು ಸುರಿಸುವ ಕೆಲಸದ ಮಧ್ಯೆ, ಆ ಬೆವರನ್ನು ಅಳಿಸುವ ಭರವಸೆಯಾಗಿ ಮಗಳ ಶಿಕ್ಷಣ ಮೂಡುತ್ತಿದೆ. “ಕಾಯಕವೇ ಕೈಲಾಸ” ಎಂಬ ಬಸವಣ್ಣನವರ ಸಂದೇಶವನ್ನು ನೆನಪಿಸುವಂತೆ ತಂದೆ ಕಾಯಕದಲ್ಲಿ ತೊಡಗಿದ್ದರೆ, ಮಗಳು ವಿದ್ಯೆಯ ಮೂಲಕ ತನ್ನ ಭವಿಷ್ಯ ರೂಪಿಸಿಕೊಳ್ಳುತ್ತಿದ್ದಾಳೆ. ಈ ಕುರಿತು ಉಪನ್ಯಾಸಕಿ ವಿಜಯಲಕ್ಷ್ಮಿ ವಣ್ಣೂರ ಮಾತನಾಡಿ, “ಮಕ್ಕಳಿಗೆ ಶಿಕ್ಷಣ ನೀಡುವುದರ ಜೊತೆಗೆ ಬದುಕಿನ ದಾರಿಯನ್ನೂ ತಿಳಿಸಬೇಕು.

ತಂದೆ–ತಾಯಿಯ ಕಷ್ಟ, ಕಾಯಕದ ಮಹತ್ವ ಮತ್ತು ಜೀವನದ ಮೌಲ್ಯಗಳನ್ನು ಮಕ್ಕಳಿಗೆ ಬಾಲ್ಯದಲ್ಲಿಯೇ ತಿಳಿಸಿದರೆ ಅದು ಮುಂದಿನ ಪೀಳಿಗೆಗೆ ಅನುಕೂಲವಾಗುತ್ತದೆ” ಎಂದು ಹೇಳಿದರು. ತಂದೆಯ ಕಾಯಕದ ಮಧ್ಯೆ ಮಗಳ ವಿದ್ಯಾಭ್ಯಾಸ?ಕಷ್ಟದ ಬದುಕಿನಲ್ಲೂ ಶಿಕ್ಷಣಕ್ಕೆ ಆದ್ಯತೆ ನೀಡುವ ಕುಟುಂಬದ ಸುಂದರ ಚಿತ್ರಣವಾಗಿದೆ.

ನೇಮಕಾತಿ ಪ್ರಕಟಣೆ

AIIMS ಜಮ್ಮು ನೇಮಕಾತಿ 2026 – 86 ಹಿರಿಯ ರೆಸಿಡೆಂಟ್ (Senior Resident) ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ

AIIMS ಜಮ್ಮು ನೇಮಕಾತಿ 2026: 86 ಹಿರಿಯ ರೆಸಿಡೆಂಟ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಆಲ್ ಇಂಡಿಂ–ಯಾ ಇನ್‌ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್ (AIIMS) ಜಮ್ಮು, ತನ್ನ ಅಧಿಕೃತ ಅಧಿಸೂಚನೆಯ ಮೂಲಕ ಹಿರಿಯ ರೆಸಿಡೆಂಟ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಜಮ್ಮು ಮತ್ತು ಕಾಶ್ಮೀರದಲ್ಲಿ ಉದ್ಯೋಗವನ್ನು ಹುಡುಕುತ್ತಿರುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 30–ಸೆಪ್ಟೆಂಬರ್–2026 ರೊಳಗೆ ಅಥವಾ ಅಂದು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: aiimsjammu.edu.in

ಹೊಸೂರು ಸಿದ್ದಾಪುರ ಗ್ರಾಮದಲ್ಲಿ ಸಾಂಸ್ಕೃತಿಕ ಭವನ ಮಂಜೂರಿಗೆ ಸಂಸದರಿಗೆ ಮನವಿ

❑ ನೈಜ್ಯ ದೆಸೆ ನ್ಯೂಸ್

ದೇವದುರ್ಗ: ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಹೊಸೂರು ಸಿದ್ದಾಪುರ ಗ್ರಾಮದ ಅಭಿವೃದ್ಧಿಗೆ ಅಗತ್ಯವಿರುವ ಸಾಂಸ್ಕೃತಿ–ಕ ಭವನವನ್ನು ಸಂಸದರ ಅನುದಾನದಲ್ಲಿ ಮಂಜೂರು ಮಾಡಿ ನಿರ್ಮಿಸಿಕೊಡುವಂತೆ ಗ್ರಾಮಸ್ಥರು ಸಂಸದರಿಗೆ ಮನವಿ ಸಲ್ಲಿಸಿದರು.




ಹೊಸೂರು ಸಿದ್ದಾಪುರ ಗ್ರಾಮದ ಮುಖಂಡರಾದ ಬಸವರಾಜ ಮಂಡಲಗುಡ್ಡ ಅವರ ನೇತೃತ್ವದಲ್ಲಿ ಗ್ರಾಮಸ್ಥರು ರಾಯಚೂರಿನ ಸಂಸದರ ಕಚೇ–ರಿಗೆ ತೆರಳಿ, ರಾಯಚೂರು ಸಂಸದರಾದ ಶ್ರೀ ಜಿ. ಕುಮಾರ್ ನಾಯಕ ಅವರನ್ನು ಭೇಟಿಯಾಗಿ ಗ್ರಾಮದಲ್ಲಿ ಸಾಂಸ್ಕೃತಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳನ್ನು ನಡೆಸಲು ಸೂಕ್ತವಾದ ಭವನದ ಅಗತ್ಯವಿದೆ ಎಂದು ತಿಳಿಸಿದರು. ಗ್ರಾಮದಲ್ಲಿ ವಿವಿಧ ಸಾಂಸ್ಕೃತಿಕ, ಧಾರ್ಮಿಕ ಹಾಗೂ ಸಾರ್ವಜನಿಕ ಕಾರ್ಯಕ್ರಮಗಳನ್ನು ಆಯೋಜಿಸಲು ಸಾಂಸ್ಕೃತಿಕ ಭವನದ ಅವಶ್ಯಕತೆ ಇದ್ದು, ಸಂಸದರ ಪ್ರದೇಶಾಭಿವೃದ್ಧಿ ನಿಧಿಯಿಂದ ಅನುದಾನ ಮಂಜೂರು ಮಾಡಿ ಭವನ ನಿರ್ಮಿಸಿಕೊಡುವಂತೆ ಮನವಿ ಮಾಡಿದರು. ಮನವಿಗೆ ಸ್ಪಂದಿಸಿದ ಸಂಸದ ಜಿ. ಕುಮಾರ್ ನಾಯಕ ಅವರು, ಸಾಂಸ್ಕೃತಿಕ ಭವನ ನಿರ್ಮಾಣದ ಬೇಡಿಕೆಯ ಕುರಿತು ಮುಂದಿನ ದಿನಗಳಲ್ಲಿ ಪರಿಶೀಲನೆ ನಡೆಸುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರು ಹಾಗೂ ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯರಾದ ಶಿವು ಪಾಟೀಲ್ ಗಾಣದಾಳ್, ಹೊಸೂರು ಸಿದ್ದಾಪುರ ಗ್ರಾಮದ ಮುಖಂಡರಾದ ಬಸವರಾಜ ಮಂಡಲಗುಡ್ಡ, ಶಿವಪ್ಪ, ವೆಂಕಟೇಶ ಹಾಗೂ ದೇವರಾಜು ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

ಇಂದು ಪೊಲೀಸ್ ಕಾನ್‌ಸ್ಟೆಬಲ್ ಹುದ್ದೆಗಳಿಗೆ ನೇಮಕಾತಿ ಪರೀಕ್ಷೆ : ನಿಷೇಧಾಜ್ಞೆ ಜಾರಿ

❑ ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಪೊಲೀಸ್ ಕಾನ್‌ಸ್ಟೇಬಲ್ ಹುದ್ದೆಗಳಿಗೆ ನಾಳೆ ನಡೆಯಲಿರುವ ನೇಮಕಾತಿ ಪರೀಕ್ಷೆಯ ಸಂಬಂಧ ಪರೀಕ್ಷಾ ಕೇಂದ್ರಗಳ ಸುತ್ತ ನಿಷೇದಾಜ್ಞೆ ಜಾರಿಗೊಳಿಸಲಾಗಿದೆ.

ನಾಳೆ ಬೆಳಗ್ಗೆ 7 ಗಂಟೆಯಿಂದ ಪರೀಕ್ಷೆ



ಮುಕ್ತಾಯಗೊಳ್ಳುವವರೆಗೆ ಎಲ್ಲಾ ಪರೀಕ್ಷಾ ಕೇಂದ್ರಗಳ 200 ಮೀಟರ್ ಸುತ್ತಲಿನ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಲಾಗಿದೆ. 200 ಮೀಟರ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಜೆರಾಕ್?ಸ ಅಂಗಡಿಗಳನ್ನು ಮುಚ್ಚಲು ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಅವರು ಆದೇಶ ಹೊರಡಿಸಿದ್ದಾರೆ. ಕೆಎಸ್‌ಆರ್‌ಪಿಸಿ ಹುದ್ದೆಗಳ ಮತ್ತು ಸ್ಥಳೀಯ ವೃಂದದ ಕೆಎಸ್‌ಆರ್‌ಪಿ, ಕೆಎಸ್‌ಐಎಸ್‌ಎಫ್, ಭಾರತೀಯ ಮೀಸಲು ಪಡೆಗೆ ಉಳಿಕೆ ಮೂಲ ವೃದದ ಹುದ್ದೆಗಳ ನೇಮಕಾತಿ ಲಿಖಿತ ಪರೀಕ್ಷೆಗಳನ್ನು ಸುಗಮವಾಗಿ ಹಾಗೂ ಸುವ್ಯವಸ್ಥಿತವಾಗಿ ನಡೆಸಲು ಈ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

ಕಾರುಣ್ಯಾಶ್ರಮದಲ್ಲಿ ಹೊನ್ನಹಳ್ಳಿಯ ದಿ. ಗುರುಪಾದಪ್ಪ ಮಹದೇವಪ್ಪ ಪೇರಿಯವರ ಪುಣ್ಯಾರಾಧನೆ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಲಿಂಗಸುಗೂರು ತಾಲೂಕಿನ ಹೊನ್ನಹಳ್ಳಿ ಗ್ರಾಮದ ದಿ.ಗುರುಪಾದಪ್ಪ ಮಹದೇವಪ್ಪ ಪೇರಿ ಇವರ 14ನೇ ವರ್ಷದ ಜನ್ಮದಿನ ಸಮಾರಂಭ ಕಾರ್ಯಕ್ರಮವನ್ನು ಅವರ ಧರ್ಮಪತ್ನಿಯವರಾದ ಸರೋಜಮ್ಮ

ದಿ. ಗುರುಪಾದಪ್ಪ ಪೇರಿ ಹಾಗೂ ಅಪಾರ ಪೇರಿ ಬಳಗದ ವತಿಯಿಂದ ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಪೇರಿ ಕುಟುಂಬದಿಂದ ಇಡೀ ದಿನ ವಿವಿಧ ಬಗೆಯ ಮಹಾಪ್ರಸಾದ ಸೇವೆ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ ದಿ. ಗುರುಪಾದಪ್ಪ ಮಹದೇವಪ್ಪ ಪೇರಿಯವರ ಭಾವಚಿತ್ರಕ್ಕೆ ವಿಶೇಷ ಪೂಜೆಯನ್ನು ಸಲ್ಲಿಸುವ ಮೂಲಕ ಅರ್ಥಪೂರ್ಣವಾಗಿ ನೆರವೇರಿತು.





ಈ ಕಾರ್ಯಕ್ರಮದಲ್ಲಿ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಮಾತನಾಡಿ ವನ್ನ ಹಳ್ಳಿಯ ಪೇರಿ ಕುಟುಂಬ ಕಾರುಣ್ಯ ಆಶ್ರಮವನ್ನು ಸ್ವಂತ ಕುಟುಂಬದ ಹಾಗೆ ಪ್ರೀತಿಸಿ ಪೂಜಿಸುತ್ತಾ ಕಾರುಣ್ಯ ಕುಟುಂಬಕ್ಕೆ ಬಹುದೊಡ್ಡ ಕರುಣಾಮಯಿ ಕುಟುಂಬವಾಗಿದೆ. ಅವರ ಸುಪುತ್ರರಾದ ಅಮರೇಶಪ್ಪ ಪೇ–ರಿಯವರು ಕಾರುಣ್ಯ ಆಶೀರ್ವಾದ ಸಲಹಾ ಸಮಿತಿ ಹಿರಿಯರಾಗಿ ನಮ್ಮ ಈ ಸೇವೆಗೆ ಮಾರ್ಗದರ್ಶಕರಾಗಿ ನಮ್ಮೊಂದಿಗಿದ್ದಾರೆ. ಮತ್ತು ವಿಶೇಷವಾಗಿ ಈ ಕುಟುಂಬದ ಹಿರಿಯರಾದ ದಿ.ಗುರುಪಾದಪ್ಪ ಇವರ ಪ್ರತಿವರ್ಷದ ಪುಣ್ಯರಾಧನೆಯನ್ನು ನಮ್ಮ ಕಾರುಣ್ಯ ಆಶ್ರಮದಲ್ಲಿ ಮತ್ತು ಇನ್ನಿತರ ಹಲವಾರು ಜನಪರ ಸಮಾಜಪರ ಕಾರ್ಯಗಳನ್ನು ಮಾಡುವ ಮೂಲಕ ಮಾಡುತ್ತಿರುವುದು. ಹೆತ್ತವರ ಮತ್ತು ಸಮಾಜದಲ್ಲಿರುವ ಗುರು ಹಿರಿಯರ ಗೌರವವನ್ನು ಕಾಪಾಡುವಂತಹ ವಿಶೇಷ ಸಂದೇಶವಾಗಿದೆ.

ಇಂದಿನ ಈ ಕಾರ್ಯಕ್ರಮದಲ್ಲಿ ನಾವು ದಿ.ಗುರುಪಾದಪ್ಪ ಅವರ ಭಾವಚಿತ್ರಕ್ಕೆ ವಿಶೇಷ ಪೂಜೆಯನ್ನು ಸಲ್ಲಿಸಿ ಪೇರಿ ಕುಟುಂಬದ ಸೇವೆಯನ್ನು ಸಂತೋಷದಿಂದ ಸ್ವೀಕಾರ ಮಾಡಿ ದಿವಂಗತರಿಗೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿ ಅವರ ಕುಟುಂಬಕ್ಕೆ ಆಶೀರ್ವದಿಸಿದ್ದೇವೆ. ನಾಡಿನ ಎಲ್ಲಾ ಹಿರಿಯರು ಕೂಡ ತಮ್ಮ ಹಿರಿಯರ ಕಾರ್ಯಕ್ರಮಗಳು ಇಂತಹ ಪುಣ್ಯಕ್ಷೇತ್ರದಲ್ಲಿ ಮಾಡಿದಾಗ ಮಾತ್ರ ತಮ್ಮೆಲ್ಲರಿಗೆ ಪುಣ್ಯ ಪ್ರಾಪ್ತಿಯಾಗುತ್ತದೆ ಎಂದು ಭಾವನಾತ್ಮಕವಾಗಿ ಮಾತನಾಡಿ ಹೊನ್ನಹಳ್ಳಿಯ ಪೇರಿ ಕುಟುಂಬಕ್ಕೆ ಧನ್ಯವಾದಗಳು ಅರ್ಪಿಸಿದರು. ಈ ಕಾರ್ಯಕ್ರಮದಲ್ಲಿ ಸರೋಜಮ್ಮ ಗಂ. ದಿ.ಗುರುಪಾದಪ್ಪ ಪೇರಿ. ಶಿವಗಂಗಮ್ಮ ಗಂ. ರಾಜಶೇಖರ ಪೇರಿ. ಜಯಲಕ್ಷ್ಮಿ ಗಂ. ಬಸವರಾಜ ಪೇರಿ. ಸುಮಂಗಲಾ ಗಂ. ದಿ.ನಿಜಲಿಂಗಪ್ಪ. ಅಂಬಿಕಾ ಗಂ.ಅಮರೇಶಪ್ಪ ಪೇರಿ. ಶೋಭಾ ಗಂ.ಮಲ್ಲಿಕಾರ್ಜುನ ಪೇರಿ. ಹಾಗೂ ಆಶ್ರಮದ ಸದಸ್ಯರಾದ ಸುಜಾತ ಹಿರೇಮಠ ಸಿಬ್ಬಂದಿಗಳಾದ ಸಿದ್ದಯ್ಯ ಸ್ವಾಮಿ. ಮರಿಯಪ್ಪ ಜ್ಯೋತಿ ಮಹಾಂತೇಶ ದೋಟಿಹಾಳ. ಶರಣು ಸ್ವಾಮಿ. ಬಸವ ಸ್ವಾಮಿ. ಹಾಗೂ ಪೇರಿ ಕುಟುಂಬದ ಮೊಮ್ಮಕ್ಕಳು ಅಪಾರ ಕುಟುಂಬ ವರ್ಗದ ಸದಸ್ಯರು ಉಪಸ್ಥಿತರಿದ್ದರು.

ಗಂಗಾವತಿ ಗೃಹರಕ್ಷಕ ದಳದ ಹಿರಿಯ ಪ್ಲಟೂನ್ ಕಮಾಂಡರ್ ಮೀರಾ ಸಾಬ್ ಮುಲ್ಲಾ ಅವರಿಗೆ ರಾಷ್ಟ್ರಪತಿಗಳ ಶ್ಲಾಘನೀಯ ಸೇವಾ ಪದಕ: ಶಾಸಕ ಗಾಲಿ ಜನಾರ್ದನ ರೆಡ್ಡಿ ಹಾಗೂ ಗಣ್ಯರಿಂದ ಸನ್ಮಾನ

❑ ನೈಜ್ಯ ದೆಸೆ ನ್ಯೂಸ್

ಕೊಪ್ಪಳ / ಗಂಗಾವತಿ : ಕರ್ನಾಟಕ ಗೃಹರಕ್ಷಕ ದಳದ ಕೊಪ್ಪಳ ಜಿಲ್ಲೆಯ ಗಂಗಾವತಿ ಘಟಕದ ಸೀನಿಯರ್ ಪ್ಲಟೂನ್ ಕಮಾಂಡರ್ ಆಗಿ ಅತ್ಯುತ್ತಮ ಮತ್ತು ನಿಸ್ವಾರ್ಥ ಸೇವೆ ಸಲ್ಲಿಸುತ್ತಿರುವ ಶ್ರೀ ಮೀರಾ ಸಾಬ್ ಮಹಬೂಬ ಸಾಬ್ ಮುಲ್ಲಾ ಅವರಿಗೆ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಭಾರತದ ಗೌರವಾನ್ವಿತ ರಾಷ್ಟ್ರಪತಿಗಳ ‘ಶ್ಲಾಘನೀಯ ಸೇವಾ ಪದಕ ಲಭಿಸಿದೆ.

ಈ ಮಹತ್ವದ ಸಾಧನೆಗೆ ಕರ್ನಾಟಕ ರಾಜ್ಯದ ಪೊಲೀಸ್ ಮಹಾನಿರ್ದೇಶಕರು ಹಾಗೂ ಗೃಹರಕ್ಷಕ ದಳ, ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಮಹಾಸಮಾದೇಷ್ಟರಾದ ಪ್ರಶಾಂತ್ ಕುಮಾರ್ ಠಾಕೂರ್ (ಐ.ಪಿ.ಎಸ್) ಅವರು ಅಧಿಕೃತ ಅಭಿನಂದನಾ ಪತ್ರ ನೀಡಿ ಶ್ಲಾಘಿಸಿದ್ದಾರೆ. ಶಾಸಕರಿಂದ ಗೌರವ ಸನ್ಮಾನ: ಗಂಗಾವತಿ ತಾಲ್ಲೂಕು ಆಡಳಿತ, ತಾಲ್ಲೂಕು



ಪಂಚಾಯಿತಿ ಹಾಗೂ ನಗರಸಭೆ ಸಂಂ–ಮುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಸಮಾರಂಭದಲ್ಲಿ, ಗಂಗಾವತಿ ಕ್ಷೇತ್ರದ ಜನಪ್ರಿಯ ಶಾಸಕರಾದ ಶ್ರೀ ಗಾಲಿ ಜನಾರ್ದನ ರೆಡ್ಡಿ ಅವರು ಹಾಗೂ ತಹಸೀಲ್ದಾರ್ ಅವರು ಶ್ರೀ ಮೀರಾ ಸಾಬ್ ಮುಲ್ಲಾ ಅವರನ್ನು ಶಾಲು ಹೊದಿಸಿ, ನೆನಪಿನ ಕಾಣಿಕೆ ನೀಡಿ ಗೌರವಪೂರ್ವಕವಾಗಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಶಾಸಕ ಜನಾರ್ದನ ರೆಡ್ಡಿ ಅವರು ಮಾತನಾಡಿ, "ಸಮಾಜದ ಶಾಂತಿ, ಸುವ್ಯವಸ್ಥೆ ಹಾಗೂ ತುರ್ತು ಸಂದರ್ಭಗಳಲ್ಲಿ ಗೃಹರಕ್ಷಕ ದಳದ ಸಿಬ್ಬಂದಿ ಪಾತ್ರ ಅತ್ಯಂತ ಮಹತ್ವದ್ದು. ಗಂಗಾವತಿಯ ಶ್ರೀ ಮೀರಾ ಸಾಬ್ ಮುಲ್ಲಾ ಅವರ ಸುದೀರ್ಘ ಹಾಗೂ ಶ್ಲಾಘನೀಯ ಸೇವೆಯನ್ನು ಗುರುತಿಸಿ ರಾಷ್ಟ್ರಪತಿಗಳ ಪದಕ ದೊರೆತಿರುವುದು ನಮ್ಮ ಗಂಗಾವತಿ ಕ್ಷೇತ್ರಕ್ಕೆ ಮತ್ತು ಕೊಪ್ಪಳ ಜಿಲ್ಲೆಗೆ ಸಂದ ಹೆಮ್ಮೆ" ಎಂದು ಮುಕ್ತಕಂಠದಿಂದ ಶ್ಲಾಘಿಸಿದರು. ಹಲವು ಗಣ್ಯರಿಂದ ಹರ್ಷ ಮತ್ತು ಅಭಿನಂದನೆ: ಶ್ರೀ ಮೀರಾ ಸಾಬ್ ಅವರಿಗೆ ರಾಷ್ಟ್ರಪತಿಗಳ ಸೇವಾ ಪದಕ ದೊರೆತಿರುವುದಕ್ಕೆ ಪ್ರಮುಖರಾದ ತಿಮ್ಮಣ್ಣ ನಾಯಕ್, ಗೋಪಾಲ್ ಶಾಸ್ತ್ರಿ, ಸಂಗಪ್ಪ ಹಿರೇಮನಿ, ಗೃಹರಕ್ಷಕ ದಳದ ಅಧಿಕಾರಿಗಳು, ಸಹ ಸಿಬ್ಬಂದಿಗಳು ಹಾಗೂ ಆತ್ಮೀಯ ಸ್ನೇಹಿತರು ಹರ್ಷ ವ್ಯಕ್ತಪಡಿಸಿ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

ಸಂಪ್ರದಾಯದಂತೆ ಜೋಕುಮಾರನ ಆಚರಣೆ: ವರುಣನ ಕೃಪೆಗಾಗಿ ಕಾಯುತ್ತಿದ್ದಾರೆ ಗಣೆನಾಡಿನ ರೈತರು

❑ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ಪ್ರಾಚೀನ ಕಾಲ ಘಟ್ಟದಿಂದಲೂ ಆಚರಿಸಿಕೊಂಡು ಬಂದಿರುವ ಉತ್ತರ ಕರ್ನಾಟಕದ ಪ್ರಸಿದ್ಧ ಹಬ್ಬಗಳಲ್ಲಿ ಒಂದಾದ ಜೋಕುಮಾರ ಹಬ್ಬಕ್ಕೆ ತನ್ನದೇ ವಿಶಿಷ್ಟ ಮಹತ್ವವಿದೆ. ಅದರಂತೆಯೆ ಕಂಪ್ಲಿ ತಾಲೂಕು ಸೇರಿದಂತೆ ಸಮೀಪದ ಹಳೆ ದರೋಜಿಯಲ್ಲಿ ಪ್ರತಿ ವರ್ಷದಂತೆ ಈ ಸಲವೂ ಗಣೇಶನ ನಿರ್ಗಮನವಾಗುತ್ತಿರುವ ನಡುವೆ ಜೋಕುಮಾರನ ಆಗಮನವಾಗಿದೆ.

ಕಂಪ್ಲಿ ಸೇರಿದಂತೆ ಗಣೆನಾಡು ಬಳ್ಳಾರಿ ಜಿಲ್ಲೆಯಲ್ಲಿ ಹೆಚ್ಚಿನ ಉಷ್ಣಾಂಶಕ್ಕೆ ಜನರು ತತ್ತ–ರಿಸುತ್ತಿರುವುದು ಒಂದೆಡೆಯಾದರೆ, ಮತ್ತೊಂದೆಡೆ ಬರದ ಛಾಯೆ ರೈತರ ಬೆನ್ನು ಬಿಡದಂತೆ ಕಾಡುತ್ತಿದೆ. ಈ ಬಾರಿ ಮಳೆ ಕೈಕೊಟ್ಟಿತ್ತಾದರೂ, ಜಲಾಶದಯಲ್ಲಿ ಗಂಗೆಮಾತೆ ಜಳಮಳಸುತ್ತಿದ್ದರೂ, ಜಲಾಶಯದ ಬಲದಂಡೆಯ ನಾಲೆ ಭಾಗದ ರೈತರಿಗೆ ಸಮರ್ಪಕವಾಗಿ ನೀರಿಲ್ಲದೇ ಇರುವುದು ಮತ್ತೊಮ್ಮೆ ರೈತರನ್ನು ಬರಗಾಲಕ್ಕೆ ದೂಡಿದ್ದು, ಇನ್ನೇನು ಗಣಪತಿ ಬಂದನಪ್ಪಾ ಮಳೆ ಬಂದಿದಪ್ಪಾ ಎನ್ನುವ ವಾಡಿಕೆ ಈ ಬಾರಿಯೂ ಉಸಿಯಾಗಿದ್ದು, ಗಣಪತಿ ನಿರ್ಗಮಿಸುತ್ತಿದ್ದಂತೆ ಜೋಕುಮಾರನ ಆಗಮನವಾಗಿದ್ದು, ಈಗಲಾದರೂ ಮಳೆ, ಬೆಳೆಯೊಂದಿಗೆ ಸಮೃದ್ಧಿ ನೆಲೆಸುವ ಆಶಾಭಾವನೆ ಮೂಡಿದೆ. ಗಣಪತಿ ಬಪ್ಪಾ ಮೋರಯಾ ಎಂಬಂತೆ ಗಣೇಶನ



ಮೂರ್ತಿಗಳನ್ನು ಪ್ರತಿಷ್ಠಾಪಿಸಿ, ದಿನಗಳಂತೆ ಗಣಪತಿ ವಿಸರ್ಜಣೆ ಮಾಡಲಾಗುತ್ತಿದ್ದು, ಈಗ ಗಣೇಶನ ನಿರ್ಗಮನವಾಗುತ್ತಿದ್ದಂತೆ ಜೋಕುಮಾರನ ಆಗಮನವಾಗಿದ್ದು, ಜಾನಪದ ಸೊಗಡಿನ ಜೋಕುಮಾರನ ಹಬ್ಬವನ್ನು ಸಾಂಪ್ರದಾಯಕವಾಗಿ ಆಚರಿಸಲಾಗುತ್ತಿದೆ.

ಇಲ್ಲಿನ ಹಳೆ ದರೋಜಿ ಗ್ರಾಮದಲ್ಲಿರುವ ಗಂಗಾಮತ ಸಮಾಜದ ಮನೆಯಲ್ಲಿ ಜೋಕುಮಾರ ಆಗಮವಾಗಿ, ಅವತಾರವೆತ್ತ ಜೋಕುಮಾರನನ್ನು ಬೇವಿನ ಎಲೆ, ಕಪ್ಪು ಮಸಿ ಸೇರಿದಂತೆ ಇನ್ನಿತರವಾಗಿ ರೂಪ ನೀಡಿ, ನಂತರ ವಿಶೇಷ ಪೂಜೆ ಸಲ್ಲಿಸಿ, ಬುಟ್ಟಿಯಲ್ಲಿ ಜೋಕುಮಾರನ ಪ್ರತಿಷ್ಠಾಪಿಸಿ, ಕ–ರಿಯಮ್ಮ, ಗೀತಮ್ಮ, ದುರ್ಗಮ್ಮ, ಕುಸುಮ, ಲಕ್ಷ್ಮಮ್ಮ, ಗೀತಮ್ಮ ತಂಡದ ಮಹಿಳೆಯರು ಪಟ್ಟಣ, ಗ್ರಾಮೀಣ ಪ್ರದೇಶ ಹಳ್ಳಿಗಳ ಮನೆ ಮನೆಗೆ ತೆರಳಿ, ಜನತೆಗೆ ಜೋಕುಮಾರನ ಆಶೀರ್ವಾದ ಕಲ್ಪಿಸುತ್ತಿದ್ದಾರೆ. ಗಣೇಶ ಹಬ್ಬದಲ್ಲಿ ಮಳೆ ತರದಿದ್ದರೂ ಜೋಕುಮಾರ ಖಂಡಿತವಾಗಿಯೂ ಮಳೆ ತಂದೇ ತರುತ್ತಾನೆ ಎಂಬ ನಂಬಿಕೆ ರೈತರಲ್ಲಿದೆ. ಭಾದ್ರಪದ ಮಾಸದಲ್ಲಿ ಬರುವ ಅನಂತನ ಹುಣ್ಣಿಮೆಯ ಮುಂಗಾರು ಸುಗ್ಗಿಯ ಹಾಗೂ ಹಿಂಗಾರಿ ಬಿತ್ತನೆಯ ನಡುವೆ ಜೋಕುಮಾರ ಬರುತ್ತಾನೆ. ಅನಂತನ ಹುಣ್ಣಿಮೆಗೆ ಹಳ್ಳಿಗಳಲ್ಲಿ ಜೋಕ್ಯಾನ ಹುಣ್ಣಿಮೆ ಎಂದು ಕರೆಯುತ್ತಾರೆ. ಪಟ್ಟಣ ಮತ್ತು ಗ್ರಾಮೀಣ ಜನರು ಪ್ರತಿ ವರ್ಷ ಶ್ರದ್ಧೆ, ಭಕ್ತಿ, ನಿಷ್ಠೆಯಿಂದ ಜೋಕುಮಾರನ ಹಬ್ಬ ಆಚರಿಸುತ್ತಾರೆ.

ಗಂಗೆ ಮಕ್ಕಳು ಎನ್ನುವ ಗಂಗಾಮತ ಸಮಾಜದ ಮಹಿಳೆಯರು ಜೋಕುಮಾರ ಮೂರ್ತಿಯನ್ನು ಬುಟ್ಟಿಯಲ್ಲಿ ಕೂಡಿಸಿಕೊಂಡು ಜೋಕ್ಯಾನ ವರ್ಣಿನೆಯ ಜನಪದ ಹಾಡುಗಳಲ್ಲಿ ಲಯಬದ್ಧವಾಗಿ ಹಾಡುತ್ತ ಹಳ್ಳಿಯ ಓಣಿ ಓಣಿಯಲ್ಲಿ ತಿರುಗುತ್ತಾರೆ. ಜೋಕುಮಾರನಿಗೆ ಅಕ್ಕಿ, ಜೋಳ, ದವಸ ಧಾನ್ಯಗಳನ್ನು ನೈವೇದ್ಯವಾಗಿ ಅರ್ಪಿಸಿದಾಗ ಬುಟ್ಟಿ ಹೊತ್ತು ತಂದ ಮಹಿಳೆಯರು ಪ್ರತಿಯಾಗಿ ಅವರ ಮರದಲ್ಲಿ ಬೇವಿನ ತಪ್ಪಲು ನುಚ್ಚನ್ನು ಪ್ರಸಾದವಾಗಿ ನೀಡುತ್ತಾರೆ. ರೈತ ಮಹಿಳೆಯರು ಜೋಕಪ್ಪನ ಬಾಯಿಗೆ ಬೆಣ್ಣೆ ಹಚ್ಚುತ್ತಾರೆ. ಆ ಬೆಣ್ಣೆಯನ್ನು ಕಣ್ಣಿಗೆ ಹಚ್ಚಿಕೊಂಡರೆ ಕಣ್ಣುಬೇನೆ ಹೋಗುತ್ತದೆ, ನಾಡಿನಲ್ಲಿ ಉತ್ತಮ ಮಳೆ, ಬೆಳೆಯೊಂದಿಗೆ ನೆಮ್ಮದಿ ಜೀವನ ದಯಪಾಲಿಸುತ್ತಾನೆಂಬ ನಂಬಿಕೆ ಹೊಂದಿದ್ದಾರೆ. ಜೋಕುಮಾರ ಗಂಗಾಮತ ಸಮಾಜದವರ ಮನೆಯಲ್ಲಿ ಹುಟ್ಟುತ್ತಾನೆ, ಅಗಲವಾದ ಮುಖ, ಅದಕ್ಕೆ ತಕ್ಕಂತೆ ಕಣ್ಣು, ಮೂಗು, ತಲೆಗೆ ರುಮಾಲು, ಹಣೆಗೆ ವಿಭೂತಿ, ಕುಂಕಮ ಇಷ್ಟೆಲಾ ಶೋಭಾಮಾನವಾಗಿರುವ ಮೂರ್ತಿ ತುಂಬಿರುವ ಬೇವಿನ ತಪ್ಪಲದ ಬುಟ್ಟಿಯಲ್ಲಿ ಕುಳಿತು 7ದಿನಗಳ ತನಕ ಊರು ಊರುಗಳಿಗೆ ತಿರುಗುತ್ತಾರೆ.

ನಾಲ್ಕೈದು ಜನ ಮಹಿಳೆಯರು ಪುಟ್ಟಿಯನ್ನು ಹೊತ್ತುಕೊಂಡು ಜಾನಪದ ಹಾಡು ಹಾಡುತ್ತಾ ಅಲೆಯುತ್ತಾರೆ. ಗುಳ್ಳವ್ವ ಜೋಕುಮಾರ ಸ್ವಾಮಿಯ ಮಡದಿ ದೇವಸ್ವರೂಪಿಯಾದ ಜೋಕುಮಾರ ಸ್ವಾಮಿ ಆನಂತನ ಹುಣ್ಣಿಮೆ ರಾತ್ರಿ ಸಂಪ್ರದಾಯದಂತೆ ಜೋಕುಮಾರನನ್ನು ಭೂಲೋಕದಿಂದ ಕೈಲಾಸಕ್ಕೆ ಕಳುಹಿಸಿಕೊಡುತ್ತಾರೆ. ಹೀಗಾಗಿ ಕಂಪ್ಲಿ ಸೇರಿದಂತೆ ಬಳ್ಳಾರಿ ಜಿಲ್ಲೆಯೊಂದಿಗೆ ಉತ್ತರ ಕರ್ನಾಟಕದ ಬಹುಭಾಗದ ಹಳ್ಳಿಗರ ಮನದಲ್ಲಿ ಜೋಕುಮಾರಸ್ವಾಮಿ ಉಳಿದುಕೊಂಡಿದ್ದಾನೆ. ಒಟ್ಟಾರೆ ಜೋಕುಮಾರಸ್ವಾಮಿ ರೈತರ ಬಾಳಿನಲ್ಲಿ ಇನ್ನೂ ಜೀವಂತ ದೇವತೆಯಾಗಿ ಉಳಿದಿರುವುದು ವಿಶೇಷವಾಗಿದೆ. ದಶ್ಶಾದೇವಿಯ ಮಗನೆನಿಸಿರುವ ಜೋಕುಮಾರ ಇಷ್ಟೆಲ್ಲ ಪರಂಪರೆ ಸಂಪ್ರದಾಯ ಹೊಂದಿದ್ದರೂ ಈತನಿಗೆ ಗುಡಿ ಗುಂಡಾರಗಳಿಲ್ಲ, ಮಧ್ಯದಲ್ಲಿಯೇ ಹುಟ್ಟಿ ಬಂದು ನಡುವೆಯೇ ಪ್ರಾಣ ಬಿಡುವ ಜೋಕುಮಾರನ ಕುರಿತು ಅನೇಕ ಜನಪದ ಕಥೆಗಳಿವೆ ಎಂದು ಹೇಳಲಾಗುತ್ತದೆ. ಈ ಆಚರಣೆಯ ವಿಶೇಷವೇನೆಂದರೆ ಗಣೇಶನ ಮುಂದೆ ಜೋಕುಮಾರ ಬರಬಾರದಂತೆ. ಆದ್ದರಿಂದ ಜೋಕುಮಾರನ ಮುಖ ಗಣೇಶ ನೋಡಬಾರದು ಎಂಬ ನಂಬಿಯಿಂದಾಗಿ ಗಣೇಶನ ಮುಖಕ್ಕೆ ಬಟ್ಟೆ ಹಾಕುತ್ತಾರೆ. ಅದು ಇಂದಿಗೂ ಚಾಲ್ತಿಯಲ್ಲಿರುವುದು ಕಂಡು ಬಂತು. ಒಟ್ನಲ್ಲಿ ಜೋಕುಮಾರನ ಹಬ್ಬವೂ ತನ್ನದೇ ವಿಶೇಷತೆಯೊಂದಿಗೆ ಜನರ, ಭಕ್ತರ, ರೈತರ ನಂಬಿಕೆಗಳಿಗೆ ಜೀವ ತುಂಬುತ್ತಾ, ಹಬ್ಬವನ್ನ ಆಚರಿಸಿಕೊಂಡು ಬರಲಾಗುತ್ತಿರುವುದು ಮತ್ತೊಂದು ವಿಶೇಷವಾಗಿದೆ.

ಎಚ್18–ಕಂಪ್ಲಿ–01: ಭೂಲೋಕಕ್ಕೆ ಆಗಮಿಸಿದ ಜೋಕುಮಾರನಿಗೆ ಬೇವಿನ ಎಲೆ, ಕಪ್ಪು ಮಸಿ, ಹೂವಿನಿಂದ ಅಲಂಕಾರ ಮಾಡಿರುವುದು.

ವಚನ ದರ್ಶನ

ಪಾತಕ ಶತಕೋಟಿಯನೊರಸಲು ಸಾಲದೆ ಒಂದು ಶಿವನ ನಾಮ ಸಾಲದೆ ಒಂದು ಹರನ ನಾಮ?ಕೂಡಲಸಂಗಮದೇವಾ, ನಿಮ್ಮ ಉಂಡಿಗೆಯ ಪಶುವ ಮಾಡಿದೆಯಾಗಿ

"ಪಾತಕ ಶತಕೋಟಿ" ಎಂಬ ಪದಗುಚ್ಛವು ವಿಶ್ವಗುರು ಬಸವಣ್ಣನವರ ಪ್ರಸಿದ್ಧ ವಚನವೊಂದರ ಭಾಗವಾಗಿದೆ.
ಪಾತಕ.ಮಹಾಪಾಪ ಅಥವಾ ತಪ್ಪು.ಶತಕೋಟಿ.ನೂರು ಕೋಟಿ (ಅನಂತ ಅಥವಾ ಅಸಂಖ್ಯಾತ).ಒರಸಲು. ಅಳಿಸಿಹಾಕಲು ಅಥವಾ ನಾಶಮಾಡಲು.ಉಂಡಿಗೆ. ಒಡೆಯನ ಮುದ್ರೆ (ಇಲ್ಲಿ ಲಿಂಗದ ಮುದ್ರೆ ಅಥವಾ ದೀಕ್ಷೆ).ಪಶು.ಪ್ರಾಣಿ ಅಥವಾ ಇಲ್ಲಿ ಭಗವಂತನಿಗೆ ಸಂಪೂರ್ಣವಾಗಿ ಶರಣಾದ ಜೀವಾತ್ಮ.

ಮನುಷ್ಯನು ಅರಿತೋ ಅಥವಾ ಅರಿಯದೆಯೋ ಮಾಡಿರುವ ನೂರು ಕೋಟಿ ಪಾಪಗಳನ್ನು (ಅಸಂಖ್ಯಾತ ತಪ್ಪುಗಳನ್ನು) ತೊಳೆದುಹಾಕಲು ಭಗವಂತನಾದ ಆ ಶಿವನ ಅಥವಾ ಹರನ ಒಂದು ನಾಮಸ್ಮರಣೆ ಸಾಲದೇ? ಖಂಡಿತವಾಗಿಯೂ ಸಾಕು ಎಂದು ಬಸವಣ್ಣನವರು ಇಲ್ಲಿ ಪ್ರತಿಪಾದಿಸುತ್ತಾರೆ.ಮುಂದುವರಿಯುವುದು,
"ಎಲೈ ಕೂಡಲಸಂಗಮದೇವನೇ, ನಾನು ನಿನ್ನ ಲಿಂಗದ ಮುದ್ರೆಯನ್ನು ಧರಿಸಿದ ನಿನ್ನದೇ ಮನೆಯ ಆಕಳು ಪಶುವಾಗಿದ್ದೇನೆ. ನನ್ನ ಒಡೆಯನಾದ ನೀನು ನನ್ನನ್ನು ಸಲಹುವಾಗ, ನನ್ನ ಪಾಪಗಳ ಬಗ್ಗೆ ನನಗೆ ಭಯವೇಕೆ?" ಎಂಬ ನಂಬಿಕೆ ಮತ್ತು ಭಕ್ತಿಯ ಶರಣಾಗತಿಯ ಭಾವ ಈ ವಚನದಲ್ಲಿದೆ. ಭಗವಂತನ ನಾಮಸ್ಮರಣೆಗೆ ಮತ್ತು ಕರುಣೆಗೆ ಅಪಾರವಾದ ಶಕ್ತಿಯಿದೆ ಎಂಬುದನ್ನು ಇದು ತಿಳಿಸುತ್ತದೆ.ನಿಮಗೆ ಈ ವಚನದ ಹೆಚ್ಚಿನ ವಿಶ್ಲೇಷಣೆ ಬೇಕೇ ಅಥವಾ ಬೇರೆ ಯಾವುದಾದರೂ ವಚನದ ಅರ್ಥ ತಿಳಿಯಬೇಕಾಗಿದೆಯೇ? ತಿಳಿಸಿ, ನಾನು ಸಹಾಯ ಮಾಡುತ್ತೇನೆ. ಈ ವಚನದಿಂದ ಜೀವನ ಪಾವನಗೊಳಿಸಿಕೊಳ್ಳೋಣ.
ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ-ಸಿಂಧನೂರು. 998094144

ಪ್ರತಿಯೊಂದು ಮನವಿಯನ್ನು ಕೂಲಂಕುಷವಾಗಿ ಪರಿಶೀಲಿಸಿ, ತ್ವರಿತವಾಗಿ ಪರಿಹರಿಸಲಾಗುವುದು – ಡಿ ಸಿ ಪೂವಿತಾ

❑ ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಮುಖ್ಯಮಂತ್ರಿಗಳ ಸೂಚನೆ ಯಂತೆ ಜನರ ಮನೆ 'ಬಾಗಿಲಿಗೆ ಆಡಳಿತ' ತಲುಪಿಸುವ ನಿಟ್ಟಿನಲ್ಲಿ ಪ್ರತಿಯೊಂದು ಸಾರ್ವಜನಿಕರ ಮನವಿಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಇಲಾಖೆಗಳ ನಡುವೆ ಸಮನ್ವಯ ಸಾಧಿಸಿ ತ್ವರಿತವಾಗಿ ಅರ್ಜಿಗಳ ವಿಲೇವಾರಿ ಮಾಡಲಾಗುವುದು ಮತ್ತು ಪರಿಹಾರದ ಮಾಹಿತಿಯನ್ನು ಅರ್ಜಿದಾರರಿಗೆ ನೀಡಲಾಗುವುದು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಹೇಳಿದರು.

ಅವರಿಂದು ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಜಿಲ್ಲಾಡಳಿತ, ತಾಲೂಕು ಆಡಳಿತ, ತಾಲೂಕು ಪಂಚಾಯತ್ ಹಾಗೂ ವಿವಿಧ ಇಲಾಖೆಯಗಳ ಸಹಯೋಗದೊಂದಿಗೆ ಪ್ರಜಾಸೇವಾ ಅಂದೋಲನ ಸಭೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಸಾರ್ವಜನಿಕರ ಕುಂದುಕೊರತೆಗಳನ್ನು ಬಗೆಹರಿಸಿ, ಅವರ ಮನೆಬಾಗಿಲಿಗೇ ಸೌಲಭ್ಯಗಳನ್ನು ತಲುಪಿಸುವ ಉದ್ದೇಶದಿಂದ ಹಮ್ಮಿಕೊಳ್ಳಲಾಗಿರುವ ಪ್ರಜಾಸೇವಾ ಆಂದೋಲನ ಕಾರ್ಯಕ್ರಮವು ಲಿಂಗಸಗೂರು ತಾಲೂಕು ಮತ್ತು ಹೋಬಳಿ ಮಟ್ಟದಲ್ಲಿ ಯಶಸ್ವಿಯಾಗಿ ನಡೆಯುತ್ತಿದೆ. ಪ್ರಜಾಸೇವಾ ಆಂದೋಲನವು ಸತತ ಮೂರನೇ ಶನಿವಾರವೂ ತಾಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಯಶಸ್ವಿಯಾಗಿ ಮುಂದುವರಿಯುತ್ತಿದೆ. ಲಿಂಗಸಗೂರು ತಾಲೂಕು ವ್ಯಾಪ್ತಿಯಲ್ಲಿ ತೀವ್ರ ಬರಗಾಲ ಆವರಿಸಿದ್ದು, ಈಗಾಗಲೇ ಸರಕಾರದಿಂದ ಬರಗಾಲ ಪೀಡಿತ ಪ್ರದೇಶವೆಂದು ಘೋಷಣೆಯಾಗಿದೆ.

ಬರ ಪರಿಹಾರಕ್ಕಾಗಿ ಬೆಳೆ ಕಟಾವು ಪ್ರಯೋಗಗಳು ಹಾಗೂ ಇತರ ಸಂಬಂಧಿತ ಪರಿಹಾರ ಕಾರ್ಯಗಳನ್ನು ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ನಡೆಯುತ್ತಿವೆ ಎಂದು ತಿಳಿಸಿದರು. ಲಿಂಗಸಗೂರು ಭಾಗದಲ್ಲಿ ಅರಣ್ಯ ಇಲಾಖೆ, ಕಂದಾಯ ಇಲಾಖೆ, ಆರ್‌ಡಿಪಿಆರ್ ಪೊಲೀಸ್ ಇಲಾಖೆ, ವಿದ್ಯಾರ್ಥಿನಿಲಯಗಳು ಸೇರಿದಂತೆ ವಿವಿಧ ಹಲವು ಇಲಾಖೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕ ಮತ್ತು ವೈಯಕ್ತಿಕ ಸಮಸ್ಯೆಗಳು ಹೆಚ್ಚಿನ ಸಂಖ್ಯೆಯಲ್ಲಿವೆ. ಪ್ರತಿಯೊಂದು ಸಮಸ್ಯೆಯನ್ನು ಸಾರ್ವಜನಿಕರು ಈ ಆಂದೋಲನ ಕಾರ್ಯಕ್ರಮದ ಮೂಲಕ ನಮಗೆ ಸಲ್ಲಿಸಬೇಕು ಎಂದರು. ನಂತರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ಈ ಹಿಂದೆ ಮಾನ್ವಿ ತಾಲೂಕಿನಲ್ಲಿ ಅಭಿಯಾನ ನಡೆಸಿ ನಂತರ, ಇಂದು ಜಿಲ್ಲಾ ಮತ್ತು ತಾಲೂಕು ಮಟ್ಟದ ಎಲ್ಲಾ ಉನ್ನತಾಧಿಕಾರಿಗಳು ಲಿಂಗಸಗೂರು ತಾಲೂಕಿನಲ್ಲಿ



ಸಾರ್ವಜನಿಕರ ಕುಂದು ಕೊರತೆಗಳನ್ನು ಆಲಿಸಲು ಮತ್ತು ಸಮಸ್ಯೆಗಳಿಗೆ ಸ್ಪಂದಿಸಲು ಆಗಮಿಸಿದ್ದಾರೆ. ಲಿಂಗಸಗೂರು ತಾಲೂಕಿನಲ್ಲಿ ಒಟ್ಟು 30 ಗ್ರಾಮ ಪಂಚಾಯಿತಿಗಳಿದ್ದು, ದೇಶದ ಪ್ರಸಿದ್ದ ಹಟ್ಟಿ ಚಿನ್ನದ ಗಣಿ ಹಾಗೂ ಜಲಧಾರೆ ಯೋಜನೆಯ ಮುಖ್ಯ ಘಟಕಗಳು ಇಲ್ಲಿ ಕಾರ್ಯನಿರ್ವಹಿಸುತ್ತಿವೆ.

ಜಲಧಾರೆ ಯೋಜನೆಯಡಿ ಜಿಲ್ಲೆಯ 1,400ಕ್ಕೂ ಹೆಚ್ಚು ವಸತಿ ಪ್ರದೇಶಗಳು ಮತ್ತು 7 ಸ್ಥಳೀಯ ಸಂಸ್ಥೆಗಳಿಗೆ ಕುಡಿಯುವ ನೀರು ಪೂರೈಸುವ 'ಡಬ್ಲ್ಯುಟಿಪಿ' ಮತ್ತು ಮುಖ್ಯ ಮೂಲಗಳು ಲಿಂಗಸಗೂರಿನಲ್ಲಿವೆ ಎಂದರು. ತಾಲೂಕಿನಲ್ಲಿ ಆರೋಗ್ಯ, ಅಪೌಷ್ಟಿಕತೆ ಮತ್ತು ಕುಡಿಯುವ ನೀರಿನ ಸಮಸ್ಯೆಗಳು ಹೆಚಾಗಿವೆ. ಅದರಲ್ಲೂ ವಿಶೇಷವಾಗಿ ಈ ಬಾರಿ ಮಳೆ ಅಭಾವದಿಂದ ಬರ ಪೀಡಿತ ಪರಿಸ್ಥಿತಿ ನಿರ್ಮಾಣವಾಗಿದ್ದು, ಪಂಚಾಯಿತಿ ಮಟ್ಟದಲ್ಲಿ ಪರಿಶೀಲಿಸಿದಾಗ ಹಲವಾರು ಸಮಸ್ಯೆಗಳು ಬೆಳಕಿಗೆ ಬಂದಿವೆ. ಸಾರ್ವಜನಿಕರ ಅರ್ಜಿಗಳು ಮತ್ತು ಕುಂದು ಕೊರತೆಗಳನ್ನು ಸ್ವೀಕರಿಸಲು ಪ್ರತ್ಯೇಕ ಕೌಂಟರ್‌ಗಳನ್ನು ತೆರೆಯಲಾಗಿದೆ. ಸಾರ್ವಜನಿಕರು ಸಲ್ಲಿಸುವ ಪ್ರತಿಯೊಂದು ಅಹವಾಲನ್ನು ಗಂಭೀರವಾಗಿ ಪರಿಗಣಿಸಿ, ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲೇ ಪರಿಹರಿಸಬಹುದಾದ ಸಮಸ್ಯೆಗಳನ್ನು ತಕ್ಷಣವೇ ಬಗೆಹರಿಸಲಾಗುವುದು. ಸರ್ಕಾರದ ಮಟ್ಟದಲ್ಲಿ ಬಗೆಹರಿಯಬೇಕಾದ ವಿಷಯಗಳನ್ನು ಜಿಲ್ಲಾಧಿಕಾರಿಗಳು ಹಾಗೂ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಶೀಘ್ರವಾಗಿ ಇತ್ಯರ್ಥಪಡಿಸಲಾಗುವುದು ಎಂದರು.

ನಂತರ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಮಾತನಾಡಿ, ಸರ್ಕಾರ ಎಂದರೆ ಕೇವಲ ಒಂದೆಡೆ ಕುಳಿತು ಅಧಿಕಾರ ನಡೆಸುವುದಲ್ಲ, ಬದಲಾಗಿ ಜನರ ಕುಂದುಕೊರತೆಗಳನ್ನು ಆಲಿಸಿ, ಅವರ ಆಶೋತ್ತರಗಳನ್ನು ಈಡೇರಿಸುವುದು ಮುಖ್ಯ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಜನರ ಸಮಸ್ಯೆಗೆ ಮನೆಬಾಗಿಲಲ್ಲೇ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ 'ಪ್ರಜಾಸೇವಾ' ಕಾರ್ಯಕ್ರಮವನ್ನು ಜಾರಿಗೆ ತರಲಾಗಿದೆ ಎಂದರು. 1ನೇ ಮತ್ತು 3ನೇ ಶನಿವಾರ ದಂದು ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಹಾಗೂ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳ ಸಮನ್ವಯದೊಂದಿಗೆ ಆಯಾ ಹೋಬಳಿಗಳಲ್ಲಿ ಈ ಕಾರ್ಯಕ್ರಮ ನಡೆಯಲಿದೆ. ಮಂಗಳೂರಿನಲ್ಲಿ ಸಚಿವ ಸಂಪುಟ ಕಾರ್ಯಕ್ರಮ ಇರುವ ಕಾರಣ ಜಿಲ್ಲಾ ಉಸ್ತುವಾರಿ ಸಚಿವರು ಬಂದಿರುವುದಿಲ್ಲ. 2ನೇ ಮತ್ತು 4ನೇ ಶನಿವಾರ ದಂದು ಆಯಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ ಅಧಿಕಾರಿಗಳ ನ್ಒಳಗೊಂಡು ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ ಎಂದರು.ಸಾರ್ವಜನಿಕರು ದೀರ್ಘಕಾಲದಿಂದ ಬಗೆಹರಿಯದೆ ಉಳಿದಿರುವ ತಮ್ಮ ವಿವಿಧ ಇಲಾಖೆಗಳ ಕುಂದುಕೊರತೆಗಳು ಹಾಗೂ ಸಮಸ್ಯೆಗಳ ಕುರಿತು ಕೌಂಟರ್‌ಗಳಲ್ಲಿ ಅಹವಾಲುಗಳನ್ನು/ಅರ್ಜಿಗಳನ್ನು ಸಲ್ಲಿಸಿ, ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು. ಸ್ಥಳದಲ್ಲೇ ನಿರ್ಧಾರ ಕೈಗೊಳ್ಳಲು ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಉನ್ನತಾಧಿಕಾರಿಗಳು ಕಾರ್ಯಕ್ರಮದಲ್ಲಿ ಇರಲಿದ್ದಾರೆ ಎಂದರು.

ರೈತರಿಗೆವಿವಿಧ ಕೃಷಿ ಸಲಕರಣೆಗಳ ವಿತರಣೆ : ಪ್ರಜಾಸೇವಾ ಕಾರ್ಯಕ್ರಮದಲ್ಲಿ ಕೃಷಿಇಲಾಖೆಯಿಂದ ಅರ್ಹ ರೈತರಿಗೆ ಕ್ರಿಮಿ ನಾಶಕ ಸಿಂಪಡಿಸುವ ಮಿಷನ್, ಹೊಲ ಬಿತ್ತನೆ ಸಾಮಾಗ್ರಿಗಳು, ರೂಟರ್, ನೀರಿನ ಪೈಪ್ ಸೇರಿದಂತೆ ವಿವಿಧ ಸಲಕರಣೆಗಳನ್ನು ವಿತರಣೆ ಮಾಡಲಾಯಿತು. ಇದಕ್ಕೂ ಮುಂಚೆ ವೇದಿಕೆ ಮೇಲೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕಂದಾಯ ಇಲಾಖೆಯ ವಿವಿಧ ಯೋಜನೆಯಡಿಯಲ್ಲಿ ಅರ್ಹ ಫಲಾನುಭವಿಗಳಿಗೆ ಪ್ರಮಾಣ ಪತ್ರ ವಿತರಣೆ ಮಾಡಲಾಯಿತು.

ವಿವಿಧ ಮಳಿಗೆಗೆ ಚಾಲನೆ : ಲಿಂಗಸಗೂರಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಪ್ರಜಾಸೇವಾ ಆಂದೋಲನ ಸಭೆಯ ಅಂಗವಾಗಿ ವಿವಿಧ ಇಲಾಖೆಯಗಳ ಸಹಯೋಗದೊಂದಿಗೆ ಸ್ಥಾಪಿಸಲಾಗಿದ್ದ ವಿವಿಧ ಮಳಿಗೆಗಳಿಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಭೇಟಿ ನೀಡಿದರು. ವಿವಿಧ ಇಲಾಖೆಗಳಾದ ಆಹಾರ, ಆಗ್ನಿ ಶಾಮಕದಳ, ಕೃಷಿ ಇಲಾಖೆ, ಅರಣ್ಯ ಇಲಾಖೆ, ಪಂಚಾಯತ್ ರಾಜ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಪ್ರಧಾನ ಮಂತ್ರಿ ಗ್ರಾಮ್ ಸಡಕ್ ಯೋಜನೆ, ಆರೋಗ್ಯ ಇಲಾಖೆ, ತೋಟಗಾರಿಕೆ ಇಲಾಖೆ, ಖಜಾನೆ, ಅಬಕಾರಿ ಇಲಾಖೆ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಾರ್ಮಿಕ ಇಲಾಖೆ, ಪಶುಪಾಲನೆ ಇಲಾಖೆ, ರೇಷ್ಮೆ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಯುವನಿಧಿ, ಉಪ ನೋಂದಣಿ ಕಚೇರಿ , ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಭೂಮಾಪನ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಂದ ಮಳಿಗೆಗಳನ್ನು ಸ್ಥಾಪಿಸಿ, ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲ ಸಿದ್ದಪ್ಪ ಪೂಜಾರಿ, ತಹಶಿಲ್ದಾರ್ ಸತ್ಯಮ್ಮ, ಆಹಾರ ಇಲಾಖೆಯ ಉಪ ನಿರ್ದೇಶಕ ನಜೀರ್ ಅಹಮದ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ನಂದಿತಾ ಎಮ್.ಎನ್., ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ್, ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಅಧ್ಯಕ್ಷರಾದ ವೆಂಕಟೇಶ ಗುತ್ತೇದಾರ, ಜಿಲ್ಲಾ ಉದ್ಯೋಗಾಧಿಕಾರಿ ನವೀನ್ ಕುಮಾರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಸುರೇಶ ಜಿ., ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಕೃಷ್ಣ ಶಾವಂತಗೇರ, ಅಬಕಾರಿ ಇಲಾಖೆಯ ಉಪ ನಿರೀಕ್ಷಕಿ ಲಕ್ಷ್ಮೀದೇವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ, ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ ಸರಸ್ವತಿ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿ, ಸಿಬ್ಬಂದಿಗಳು ಹಾಗೂ ಪಟ್ಟಣದ ಸಾರ್ವಜನಿಕರು ಉಪಸ್ಥಿತರಿದ್ದರು.

ಡಿವೈಡರ್ ರಸ್ತೆ ಕಾಮಗಾರಿ ಪರಿಶೀಲಿಸಿದ ಶಾಸಕ

❑ ನೈಜ್ಯ ದೆಸೆ ನ್ಯೂಸ್

ಮಸ್ಕಿ: ಪಟ್ಟಣದ ಅಶೋಕ ವೃತ್ತದಿಂದ ಮೌನೇಶ್ವರ ವೃತ್ತದವರೆಗೆ ಕೆಕೆಆರ್‌ಡಿಬಿ ಅನುದಾನದ ?1.80 ಕೋಟಿ ವೆಚ್ಚದಲ್ಲಿ ಕೈಗೊಂಡಿರುವ ಡಿವೈಡರ್ ರಸ್ತೆ ಕಾಮಗಾರಿ ಸ್ಥಳಕ್ಕೆ ಶಾಸಕ ಆರ್. ಬಸನಗೌಡ ತುರ್ವಿಹಾಳ ಶನಿವಾರ ಭೇಟಿ ನೀಡಿ ಪರಿಶೀಲಿಸಿದರು.



ರಸ್ತೆ ವಿಸ್ತರಣೆಗೆ ಅಡ್ಡಿಯಾಗಿರುವ ಕೆಲವು ಕಟ್ಟಡಗಳ ಒತ್ತುವರಿ ತೆರವು ಪೂರ್ಣಗೊಳ್ಳದ ಕಾರಣ ಕಾಮಗಾರಿ ಸ್ಥಗಿತಗೊಂಡಿರುವುದನ್ನು ಗಮನಿಸಿದ ಅವರು, ವಿಳಂಬದ ಬಗ್ಗೆ ಅಧಿಕಾರಿಗಳ ಕಾರ್ಯವೈಖರಿಗೆ ಅಸಮಾಧಾನ ವ್ಯಕ್ತಪಡಿಸಿದರು. ಕೂಡಲೇ ರಸ್ತೆ ಕಾಮಗಾರಿಗೆ ಅಡ್ಡಿಯಾಗಿರುವ ಕಟ್ಟಡಗಳನ್ನು ತೆರವುಗೊಳಿಸಿ ಎಲ್ಲರಿಗೂ ಒಂದೇ ರೀತಿಯಲ್ಲಿ ತೆರವು ಮಾಡಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಮಲ್ಲಯ್ಯ ಬಳ್ಳ, ಹನುಮಂತಪ್ಪ ವೆಂಕಟಾಪುರ, ವೀರೇಶ್ ಪಾಟೀಲ್, ಪಿ ಡಬ್ಲ್ಯೂಡಿ ಇಲಾಖೆಯ ಸಂದೀಪ್ ಯಾದವ್ ಸೇರಿದಂತೆ ಇನ್ನಿತರರು ಇದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ಶಿಕ್ಷಕ ವೃತ್ತಿ ಜವಬ್ದಾರಿಯುತವಾದದ್ದು– ಎನ್.ಎಸ್. ಬೋಸರಾಜು

❑ ನೈಜ್ಯ ದೆಸೆ ನ್ಯೂಸ್

ಕವಿತಾಳ: ಶಿಕ್ಷಕರ ವೃತ್ತಿ ಕೇವಲ ಬೋದನೆ ಮಾಡುವುದು ಮಾತ್ರವಲ್ಲ ಅದು ಸಮಾಜದ ಭವಿಷ್ಯವನ್ನು ರೂಪಿಸುವ ಮಹತ್ತರವಾದ ಜವಬ್ದಾರಿಯುತವಾದದ್ದು ಎಂದು ವಿಧಾನ ಪರಿಷತ್ ಸದಸ್ಯ, ಮಾಜಿ ಸಚಿವರಾದ ಎನ್. ಎಸ್. ಬೋಸರಾಜು ಅವರು ಹೇಳಿದರು.

ಅವರು ಇಂದು ಪಟ್ಟಣದ ಜೆಡಿ-ಎಸ್ ಕಲ್ಯಾಣ ಮಂಟಪದಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ವತಿಯಿಂದ ಹಮ್ಮಿಕೊಂಡಿದ್ದ ಸಿರವಾರ ತಾಲ್ಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಹಾಗೂ ಖಾಸಗಿ ಶಾಲಾ ಶಿಕ್ಷಕರಿಗೆ ಸನ್ಮಾನ ಸಮಾರಂಭದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಶಿಕ್ಷಕರು ಮುಖ್ಯವಾಗಿ ಶಿಸ್ತು, ಸಮಯಪಾಲನೆ, ತಾಳ್ಮೆ, ನೈತಿಕತೆ, ಮಾನವಿಯ ಮೌಲ್ಯಗಳು ಹಾಗೂ ಮಕ್ಕಳಿಗೆ ಸಮಾಜಿಕ ಅರಿವು ಮೂಡಿಸುವ ಮೂಲಕ ಮಕ್ಕಳಲ್ಲಿ ಉತ್ತಮ ನಾಗರೀಕ ಪ್ರಜ್ಞೆಯನ್ನು ಮೂಡಿಸಿ ಅವರನ್ನು ಉತ್ತಮ ನಾಗರೀಕರನ್ನಾಗಿ ರೂಪಿಸುವ ಕೆಲಸ



ಮಾಡಬೇಕು, ಬದಲಾಗುತ್ತಿರುವ ಇಂದಿನ ತಂತ್ರಜ್ಞಾನ ಮತ್ತು ಶಿಕ್ಷಣ ವ್ಯವಸ್ಥೆಗೆ ತಕ್ಕಂತೆ ಶಿಕ್ಷಕರು ನಿರಂತರವಾಗಿ ತಮ್ಮ ಜ್ಞಾನವನ್ನು ವೃದ್ದಿಸಿಕೊಂಡು ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ಸರಿಯಾದ ಮಾರ್ಗದರ್ಶನ ನೀಡಬೇಕು ಮತ್ತು ಸಮಾಜಕ್ಕೆ ತಮ್ಮ ನಿಸ್ವಾರ್ಥ ಸೇವೆ ಅಗತ್ಯವಿದ್ದು ತಾವುಗಳು ನಿಸ್ವಾರ್ಥತೆಯಿಂದ ಸೇವೆ ಮಾಡುವಂತೆಕಿವಿ ಮಾತು ಹೇಳಿದರು.

ಕಾರ್ಯಕ್ರಮದ ಸಾನಿದ್ಯವನ್ನು ಶ್ರೀಕಲ್ಮಠದ ಅಭಿನವ ಸಿದ್ದಲಿಂಗ ಮಹಾಸ್ವಾಮಿಗಳು ವಹಿಸಿದ್ದರು. ಮಾನ್ವಿ ಶಾಸಕ ಜಿ. ಹಂಪಯ್ಯ ನಾಯಕ್, ಖಾಸಗಿ ಶಿಕ್ಷಣ ಸಂಸ್ಥೇಗಳ ಒಕ್ಕೂಟದ ತಾಲ್ಲೂಕ ಅಧ್ಯಕ್ಷ ಪ್ರಕಾಶ ಪಾಟೀಲ್.



ಬಿ.ಎ.ಕರೀಂಸಾಬ್ ಮಾತನಾಡಿದರು. ಈ ಸಂದರ್ಭದಲ್ಲಿ ಮಹಾಂತೇಶ್ ಪಾಟೀಲ್ ಅತ್ತೂರ್, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಕಿರಿಲಿಂಗಪ್ಪ, ಮಾಳಪ್ಪ ತೋಳ, ಶರಣಯ್ಯ ನಾಯಕ್ ಗುಡದಿನ್ನಿ, ನಾಗರಾಜ್ ಮಸ್ಕಿ, ವೀರನಗೌಡ ಹಣಗಿ, ಜಿಲ್ಲಾ ವಿವಿಧ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಮುಖಂಡರಾದ ಟಿ. ಬಸವರಾಜ್ ಸಿರವಾರ, ವಾಹಾಬ್ ಮೋಶಿನ್, ಮಹೇಶ ಅರಿಕೇರಿ, ಪಕ್ರುದ್ದಿನ್, ಅಮರೇಶ ಸಜ್ಜನ್, ಹಾಗೂ ವಿವಿಧ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರು ಸೇರಿದಮತೆ ಶಿಕ್ಷಕರು ಉಪಸ್ಥಿತರಿದ್ದರು. 36 ಜನ ಶಿಕ್ಷಕರಿಗೆ ಉತ್ತಮ ಶಿಕ್ಷಕ ಪ್ರಶಸ್ತಿ ಹಾಗೂ ನಾಲ್ಕು ಜನ ಶಿಕ್ಷಕರಿಗೆ ಚಿನ್ನದ ಪದಕ ನೀಡಿ ಗೌರವಿಸಲಾಯಿತು.

ಜಾಲಹಳ್ಳಿಯಲ್ಲಿ 2026–27ನೇ ಸಾಲಿನ ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದಿಂದ ಅದ್ದೂರಿಯಾಗಿ ಶಿಕ್ಷಕರ ದಿನಾಚರಣೆ

ಉತ್ತಮ ಶಿಕ್ಷಕ–ಶಿಕ್ಷಕಿಯರಿಗೆ ಪ್ರಶಸ್ತಿ ಪ್ರದಾನ; ಖಾಸಗಿ ಶಿಕ್ಷಕರಿಗೆ 5 ಲಕ್ಷ ವಿಮೆ ಕಲ್ಪಿಸಲು ಆಗ್ರಹ

❑ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಪಟ್ಟಣದಲ್ಲಿ ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟ (ರಿ.), ರಾಯಚೂರು ಹಾಗೂ ದೇವದುರ್ಗ ತಾಲೂಕು ಘಟಕದ ವತಿಯಿಂದ 2026?27ನೇ ಸಾಲಿನ ಶಿಕ್ಷಕರ ದಿನಾಚರಣೆ ಹಾಗೂ ಉತ್ತಮ ಶಿಕ್ಷಕ?ಶಿಕ್ಷಕಿಯರ ಪ್ರಶಸ್ತಿ ಪ್ರದಾನ ಸಮಾರಂಭ ಶನಿವಾರ ಅದ್ದೂರಿಯಾಗಿ ಜರುಗಿತು.

ಬೆಳಿಗ್ಗೆ 10.30ಕ್ಕೆ ಬಸವೇಶ್ವರ ವೃತ್ತದಿಂದ ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರದೊಂದಿಗೆ ಮೆರವಣಿಗೆ ಆರಂಭಗೊಂಡು, ತಿಂತಿಣಿ ಬ್ರಿಡ್ಜ್ ರಸ್ತೆಯಲ್ಲಿರುವ ಶ್ರೀ ಜಗದಾರಾಧ್ಯ ಜಯಶಾಂತಲಿಂಗೇಶ್ವರ ಸಹಕಾರ ಸಭಾಭವನಕ್ಕೆ ತಲುಪಿತು. ಮೆರವಣಿಗೆಯಲ್ಲಿ ರಾಯಚೂರು ಜಿಲ್ಲೆಯ ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಶಿಕ್ಷಕ?ಶಿಕ್ಷಕಿಂ-ಯರು, ಶಿಕ್ಷಣ ಪ್ರೇಮಿಗಳು ಹಾಗೂ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಸಭಾಭವನದಲ್ಲಿ ಭಕ್ತಿಗೀತೆ ಕಾರ್ಯಕ್ರಮದೊಂದಿಗೆ ಸಮಾರಂಭಕ್ಕೆ ಚಾಲನೆ ನೀಡಲಾಯಿತು. ಬೆಂಗಳೂರಿನ ವಿಶೇಷ ಉಪನ್ಯಾಸಕ ವಿವೇಕಾನಂದ ಎಚ್.ಕೆ. ಅವರು ವಿಶೇಷ ಉಪನ್ಯಾಸ ನೀಡಿ, ಶಿಕ್ಷಣ ಕ್ಷೇತ್ರದಲ್ಲಿ ಶಿಕ್ಷಕರ ಪಾತ್ರ, ಜವಾಬ್ದಾರಿ ಹಾಗೂ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಮಹತ್ವವನ್ನು ವಿವರಿಸಿದರು.



ಖಾಸಗಿ ಶಿಕ್ಷಕರಿಗೆ ?5 ಲಕ್ಷ ವಿಮೆಗೆ ಆಗ್ರಹ ಪ್ರಾಸ್ತಾವಿಕವಾಗಿ ಮಾತನಾಡಿದ ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ರಾಯಚೂರು ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಗರಾಜ್ ಮಸ್ಕಿ, ಸಂಘಟನೆಯು ಜಿಲ್ಲೆಯಲ್ಲಿ ಉತ್ತಮವಾಗಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರನ್ನು ಗುರುತಿಸಿ ಪ್ರತಿವರ್ಷ ಪ್ರಶಸ್ತಿ ನೀಡಿ ಗೌರವಿಸುತ್ತಿದೆ ಎಂದರು.

ಸಿಂಧನೂರು ಕ್ಷೇತ್ರದ ಶಾಸಕ ಬಸನಗೌಡ ಬಾದರ್ಲಿ ಅವರು ಕೆಕೆಆರ್‌ಡಿಬಿ ಅನುದಾನದಡಿ ಸಿಂಧನೂರು ತಾಲೂಕಿನ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಕಿಟ್‌ಗಳನ್ನು ವಿತರಿಸುವ ಕಾರ್ಯ ಕೈಗೊಂಡಿರುವುದನ್ನು ಪ್ರಸ್ತಾಪಿಸಿದ ಅವರು, ಇದೇ ಮಾದರಿಯಲ್ಲಿ ಕೆಕೆಆರ್‌ಡಿಬಿ ಅನುದಾನದಡಿ ಜಿಲ್ಲೆಯ ಖಾಸಗಿ ಶಿಕ್ಷಣ ಸಂಸ್ಥೆಗಳ ಶಿಕ್ಷಕ?ಶಿಕ್ಷಕಿಂ-ಯರಿಗೆ ತಲಾ ?5 ಲಕ್ಷದ ವಿಮಾ ಸೌಲಭ್ಯ ಕಲ್ಪಿಸಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು.

ಮಾನ್ವಿ ತಾಲೂಕಿನ ಖಾಸಗಿ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಯೊಬ್ಬರು 625ಕ್ಕೆ 625 ಅಂಕಗಳನ್ನು ಗಳಿಸಿದ ಹಿನ್ನೆಲೆಯಲ್ಲಿ ಸರ್ಕಾರದಿಂದ ಸನ್ಮಾನಿಸಲ್ಪಟ್ಟಿದ್ದರೂ, ಆ ಸಾಧನೆಗೆ ಕಾರಣರಾದ ಶಿಕ್ಷಕರಿಗೆ ಸಮರ್ಪಕ ಗೌರವ ದೊರಕಿಲ್ಲ. ಇಂತಹ ತಾರತಮ್ಯವನ್ನು ಸರ್ಕಾರ ನಿವಾರಿಸಬೇಕು ಎಂದು ಆಗ್ರಹಿಸಿದರು. ಮಾತನಾಡಿದ ಅವರು, ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಭದ್ರತೆ ಹಾಗೂ ಕಲ್ಯಾಣದ ಕುರಿತು ಸರ್ಕಾರದ ಗಮನಕ್ಕೆ ತಂದು ಅಗತ್ಯ ಕ್ರಮ ಕೈಗೊಳ್ಳಲು ಪ್ರಯತ್ನಿಸಲಾಗುವುದು ಎಂದು ಹೇಳಿದರು. ಮುಂದಿನ ದಿನಗಳಲ್ಲಿ

ಬಾದರ್ಲಿ ಹಂಪನಗೌಡ: ಕೌಶಲ್ಯಾಭಿವೃದ್ಧಿಗೆ ಆದ್ಯತೆ ಅಗತ್ಯ

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ರಾಯಚೂರು ಅಧ್ಯಕ್ಷ ಹಾಗೂ ಶಾಸಕ ಬಾದರ್ಲಿ ಹಂಪನಗೌಡ ಮಾತನಾಡಿ, ಖಾಸಗಿ ಶಿಕ್ಷಣ ಸಂಸ್ಥೆಗಳು ಕಾಲಕ್ಕೆ ತಕ್ಕಂತೆ ಬದಲಾವಣೆಗಳನ್ನು ಅಳವಡಿಸಿಕೊಂಡು ಹೊಸ ಆವಿಷ್ಕಾರಗಳಿಗೆ ಉತ್ತೇಜನ ನೀಡಬೇಕು ಎಂದು ಸಲಹೆ ನೀಡಿದರು.

ದೊರೆಯುವ ವಿಶೇಷ ಅನುದಾನಗಳಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಸೌಲಭ್ಯ ಕಲ್ಪಿಸುವ ಕುರಿತು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಅಲ್ಲದೆ, ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ವತಿಯಿಂದ ಖಾಸಗಿ ಶಾಲಾ ಶಿಕ್ಷಣ ಸಂಸ್ಥೆಗಳಿಗಾಗಿ ಭವನ ನಿರ್ಮಿಸುವ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಶಿಕ್ಷಣದಲ್ಲಿ ನೈತಿಕ ಮೌಲ್ಯಗಳಿಗೆ ಒತ್ತು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಶ್ರೀ-ಜಯಶಾಂತಲಿಂಗೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಶಾಲೆಗಳಲ್ಲಿ ಶೈಕ್ಷಣಿಕ ಜ್ಞಾನಕ್ಕೆ ಮಾತ್ರವಲ್ಲದೆ ನೈತಿಕ ಮೌಲ್ಯಗಳ ಶಿಕ್ಷಣಕ್ಕೂ ಹೆಚ್ಚಿನ ಆದ್ಯತೆ ನೀಡುವ ಅಗತ್ಯವಿದೆ ಎಂದು ಹೇಳಿದರು. ಖಾಸಗಿ ಶಿಕ್ಷಣ ಸಂಸ್ಥೆಗಳ ಅಭಿವೃದ್ಧಿಗೆ ಸರ್ಕಾರದಿಂದ ಅನುದಾನ ಕಲ್ಪಿಸುವಂತೆ ಶಾಸಕರು ಸರ್ಕಾರದ ಮೇಲೆ ಒತ್ತಡ ತರಬೇಕು. ಶಿಕ್ಷಣ ಸಂಸ್ಥೆಗಳಿಗೆ ಅನುದಾನ

ಶಾಸಕಿ ಕರೇಮ್ಮ ಜಿ. ನಾಯಕ್ ಭರವಸೆ

ಕಾರ್ಯಕ್ರಮವನ್ನು ದೇವದುರ್ಗ ಶಾಸಕಿ ಕರೇಮ್ಮ ಜಿ. ನಾಯಕ್ ಅವರು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು

ನೀಡುವಲ್ಲಿ ಯಾವುದೇ ತಾರತಮ್ಯ ಮಾಡದೆ ಅಗತ್ಯ ನೆರವು ಒದಗಿಸಬೇಕು ಎಂದು ಸಲಹೆ ನೀಡಿದರು.

ವಿದ್ಯಾರ್ಥಿಗಳಲ್ಲಿ ಕೌಶಲ್ಯಾಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಸರ್ಕಾರ ಕೌಶಲ್ಯಾಭಿವೃದ್ಧಿ ಸಂಸ್ಥೆಗಳನ್ನು ಸ್ಥಾಪಿಸಲು ಮುಂದಾಗಿದ್ದು, ಸಿಂಧನೂರಿನಲ್ಲಿ ಈಗಾಗಲೇ ಕೌಶಲ್ಯಾಭಿವೃದ್ಧಿ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ. ರಾಯಚೂರು ಗ್ರಾಮೀಣ ಪ್ರದೇಶದಲ್ಲಿಯೂ ಇಂತಹ ವ್ಯವಸ್ಥೆ ಇದೆ. ಮುಂದಿನ ದಿನಗಳಲ್ಲಿ ಎಲ್ಲಾ ಕಡೆ ಕೌಶಲ್ಯಾಭಿವೃದ್ಧಿ ಸಂಸ್ಥೆಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ವಿಶೇಷ ಅನುದಾನದಡಿ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ನೆರವು ಒದಗಿಸಿ, ವಿಶೇಷ ತರಬೇತಿ ಸಂಸ್ಥೆಗಳನ್ನು ಆರಂಭಿಸಲು ಅನುಕೂಲ ಮಾಡಿಕೊಡಬೇಕು. ಖಾಸಗಿ ಶಿಕ್ಷಣ ಸಂಸ್ಥೆಗಳು ತಮ್ಮ ಕ್ಷೇತ್ರದ ಶಾಸಕರಿಗೆ ಮನವಿ ಸಲ್ಲಿಸಿ ವಿಶೇಷ ಅನುದಾನ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು. ಖಾಸಗಿ ಶಾಲಾ ಶಿಕ್ಷಕರಿಗೆ ?5 ಲಕ್ಷ ವಿಮಾ ಸೌಲಭ್ಯ ಕಲ್ಪಿಸುವ ಬೇಡಿಕೆಯನ್ನು ಸರ್ಕಾರದ ಗಮನಕ್ಕೆ ತಂದು, ಕೆಕೆಆರ್‌ಡಿ?

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101